ವಿಜಯಪುರ | ಸಂಪುಟ 02 | ಸಂಚಿಕೆ 87 | ಪುಟ 4 | ₹ 3.00
https://udayarashminews.com
udayarashmi 90088 88340
# ಉದಯ ರಶ್ಮಿ
Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ
ಸಂಪಾದಕ : ಇಂದುಶೇಖರ ಮಣೂರ Editor: Indushekhar Manur
editor.udayarashmi@gmail.com RNI NO: KARKAN/2023/86203 ಶುಕ್ರವಾರ, ಮೇ 24, 2024



“ಕೇಂದ್ರ ಸರ್ಕಾರವು ಕಾನೂನಿನ ಚೌಕಟ್ಟಿನಲ್ಲಿ ಸಹಾಯ ಮಾಡಬೇಕು. ಬರೀ ಟೀಕೆ ಮಾಡಿದರೆ ಅರ್ಥವಿಲ್ಲ. ಪ್ರಜ್ವಲ್ ರೇವಣ್ಣ ಅವರ ಮೇಲೆ ವಾರೆಂಟ್ ಜಾರಿ ಮಾಡಿರುವುದನ್ನು ತಿಳಿಸಲಾಗಿದೆ. ವಾರೆಂಟ್ ಜಾರಿಯಾದ ನಂತರ ಪಾಸ್‌ಪೋರ್ಟ್ ರದ್ದುಗೊಳಿಸುವುದು ಕೇಂದ್ರ ಸರ್ಕಾರದ ಕರ್ತವ್ಯ.”

– ಜಿ.ಪರಮೇಶ್ವರ್
ಗೃಹ ಸಚಿವರು

ಉದಯರಶ್ಮಿ ದಿನಪತ್ರಿಕೆ

### ಪ್ರಜ್ವಲ್ ರೇವಣ್ಣ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಗೊಳಿಸುವ ಪ್ರಕ್ರಿಯೆಗೆ ಚಾಲನೆ | ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಮಾಹಿತಿ

# ಪ್ರಜ್ವಲ್ ವಾಪಸ್ ಕರೆತರಲು ಸಹಕಾರ ನೀಡಲು ಸಿದ್ಧ :ಜೋಶಿ

ಬೆಂಗಳೂರು: ಹಲವಾರು ಮಹಿಳೆಯರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಎದುರಿಸುತ್ತಿರುವ, ಜೆಡಿಎಸ್‌ನಿಂದ ಅಮಾನತುಗೊಂಡಿರುವ ಜೆಡಿಎಸ್ ಸಂಸದ, ಲೋಕಸಭಾ ಚುನಾವಣೆ ಎನ್‌ಡಿಎ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಗೊಳಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಗುರುವಾರ ಹೇಳಿದ್ದು, ‘ಅವರನ್ನು ದೇಶಕ್ಕೆ ಕರೆತರಲು ಕೇಂದ್ರವು ಸಹಕರಿಸಲು ಸಿದ್ಧ” ಎಂದರು.

ಈ ಬಗ್ಗೆ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, “ಪ್ರಜ್ವಲ್ ವಿದೇಶಕ್ಕೆ ತೆರಳುವ ಮುನ್ನವೇಕೆ ಪ್ರಕರಣ ದಾಖಲಿಸಿ ಬಂಧಿಸಲಿಲ್ಲ” ಎಂದು ಪ್ರಶ್ನಿಸಿದರು. “ಕಾಂಗ್ರೆಸ್ ಪಕ್ಷವು ಕೇಂದ್ರದ ಮೇಲೆ ಆರೋಪ ಹೊರಿಸಲು ಪ್ರಯತ್ನಿಸುತ್ತಿದೆ; ಈ ವಿಷಯದಲ್ಲಿ ರಾಜಕೀಯ ಮಾಡುತ್ತಿದೆ” ಎಂದು ಕೇಂದ್ರ ಸಚಿವರು ಆರೋಪಿಸಿದರು.

ಪ್ರಜ್ವಲ್ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಪಡಿಸಲು ತ್ವರಿತ ಮತ್ತು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಒತ್ತಾಯಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಎರಡನೇ ಪತ್ರ ಬರೆದಿರುವ ಪ್ರಶ್ನೆಗೆ ಪ್ರತಿಕ್ರಿಯಿಸಿದ ಜೋಶಿ, “ರಾಜತಾಂತ್ರಿಕ ಪಾಸ್‌ಪೋರ್ಟ್‌ಗಳನ್ನು ರದ್ದುಗೊಳಿಸುವ ಪ್ರಕ್ರಿಯೆ ಇದೆ ಇದುವರೆಗೆ ಸಿದ್ದರಾಮಯ್ಯ, ಡಿ ಕೆ ಶಿವಕುಮಾರ್ (ಉಪ ಸಿಎಂ) ಮತ್ತು ಪರಮೇಶ್ವರ (ಗೃಹ ಸಚಿವರು) ನನ್ನ ಪ್ರಶ್ನೆಗೆ ಪ್ರತಿಕ್ರಿಯಿಸಿಲ್ಲ” ಎಂದರು.



“ಏಪ್ರಿಲ್ 21 ರಂದು ಕ್ಲಿಪ್ಪಿಂಗ್ (ಪ್ರಜ್ವಲ್ ಒಳಗೊಂಡ ಸ್ಪಷ್ಟ ಕ್ಲಿಪ್ಪಿಂಗ್) ಒಳಗೊಂಡ ಮೊದಲ ಪೆನ್ ಡ್ರೈವ್ ಹೊರಬಂದಿದೆ, ಪ್ರಜ್ವಲ್ ರೇವಣ್ಣ ಏಪ್ರಿಲ್ 27 ರಂದು ವಿದೇಶಕ್ಕೆ ತೆರಳಿದ್ದಾರೆ. ಅವರು ಏಳು ದಿನಗಳ ಕಾಲ ಕತ್ತೆಗಳನ್ನು ಕಾಯುತ್ತಿದ್ದರಾ? ನೀವು ಏಕೆ ಎಫ್‌ಐಆರ್ ದಾಖಲಿಸಿ ಬಂಧಿಸಲಿಲ್ಲ” ಎಂದು ಜೋಶಿ ಪ್ರಶ್ನಿಸಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, “ಪ್ರಜ್ವಲ್ ಅವರನ್ನು ವಿದೇಶದಿಂದ ವಾಪಸ್ ಕರೆತರುವ ಪ್ರಕ್ರಿಯೆ ನಡೆಯುತ್ತಿದ್ದು, ಕಾನೂನು ಪ್ರಕಾರ ಅಗತ್ಯ ಪ್ರಕ್ರಿಯೆಗಳನ್ನು ಅನುಸರಿಸಿ ರಾಜ್ಯ ಸರ್ಕಾರಕ್ಕೆ ಸಹಕಾರ ನೀಡಲು ಕೇಂದ್ರ ಸರ್ಕಾರ ಸಿದ್ಧವಿದೆ” ಎಂದರು.

“ಆದರೆ, ನಾವು ಸಿಎಂ ಅಥವಾ ರಾಜ್ಯ ಸರ್ಕಾರ ಪತ್ರ ಬರೆದ ತಕ್ಷಣ ಈ ವಿಷಯ ನಡೆಯಬೇಕು, ಇಲ್ಲದಿದ್ದರೆ ಬಿಜೆಪಿ ಮೇಲೆ ಆರೋಪ ಹೊರಿಸುವುದು ಸರಿಯಲ್ಲ. ರಾಜ್ಯ ಸರ್ಕಾರ ಪೆನ್ ಡ್ರೈವ್‌ನಲ್ಲಿ ಕ್ರಮ ಕೈಗೊಂಡಿಲ್ಲ. ಮೊದಲ ಹಂತದ ಚುನಾವಣೆ ಮುಗಿಯುವವರೆಗೆ (ಏಪ್ರಿಲ್ 26 ರಂದು) ಒಕ್ಕಲಿಗ ಮತಗಳ ಮೇಲೆ ಕಣ್ಣಿಟ್ಟು ಈಗ ಅವರು ಕೇಂದ್ರದ ಮೇಲೆ ಆರೋಪ ಹೊರಿಸಲು ಪ್ರಯತ್ನಿಸುತ್ತಿದ್ದಾರೆ. ಇದೊಂದು ಗಂಭೀರ ಪ್ರಕರಣವಾಗಿದ್ದು, ಪ್ರಜ್ವಲ್ ತನಿಖೆಯನ್ನು ಎದುರಿಸಬೇಕಾಗಿದ್ದು, ತಪ್ಪಿತಸ್ಥರಾಗಿದ್ದರೆ ಶಿಕ್ಷೆಯನ್ನು ಎದುರಿಸಬೇಕಾಗುತ್ತದೆ. ಅದರ ಬಗ್ಗೆ ಪ್ರಶ್ನೆಯೇ ಇಲ್ಲ. ಆದರೆ, ಕರ್ನಾಟಕ ಸರ್ಕಾರವು ತನಿಖೆಗಿಂತ ಹೆಚ್ಚಾಗಿ ಈ ಪ್ರಕರಣದಲ್ಲಿ ರಾಜಕೀಯ ಮಾಡಲು ಪ್ರಯತ್ನಿಸುತ್ತಿದೆ” ಎಂದು ಜೋಶಿ ಹೇಳಿದರು.

“ಪ್ರಜ್ವಲ್ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಪಡಿಸುವ ಕುರಿತು ಅವರು ಈ ಹಿಂದೆ ಬರೆದ ಪತ್ರವು ಪರಿಸ್ಥಿತಿಯ ಗಂಭೀರತೆಯ ಹೊರತಾಗಿಯೂ ಕ್ರಮ ಕೈಗೊಳ್ಳದಿರುವುದು ಬೇಸರ ತಂದಿದೆ “ಎಂದು ಪ್ರಧಾನಿ ಮೋದಿಗೆ (ಮೇ 22 ರಂದು) ಬರೆದ ಪತ್ರದಲ್ಲಿ ಸಿದ್ದರಾಮಯ್ಯ ಹೇಳಿದ್ದಾರೆ.

ಪ್ರಜ್ವಲ್ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದುಗೊಳಿಸಲು ಶೀಘ್ರ ಕ್ರಮ ಕೈಗೊಳ್ಳುವಂತೆ ವಿದೇಶಾಂಗ ಮತ್ತು ಗೃಹ ಸಚಿವಾಲಯಗಳನ್ನು ಒತ್ತಾಯಿಸುವಂತೆ ಮುಖ್ಯಮಂತ್ರಿಗಳು ಮೇ 1 ರಂದು ಮೋದಿ ಅವರಿಗೆ ಪತ್ರ ಬರೆದಿದ್ದರು.

ಈ ಎಲ್ಲ ಬೆಳವಣಿಗೆಗಳ ನಡುವೆ, ವಿದೇಶಾಂಗ ವ್ಯವಹಾರಗಳ ಸಚಿವಾಲಯ (ಎಂಇಎ) ಪ್ರಜ್ವಲ್ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ಅನ್ನು ರದ್ದುಗೊಳಿಸುವಂತೆ ಕರ್ನಾಟಕ ಸರ್ಕಾರದ ಮನವಿಯನ್ನು ಪ್ರಕ್ರಿಯೆಗೊಳಿಸುತ್ತಿದೆ ಎನ್ನಲಾಗಿದೆ.

ಪ್ರಜ್ವಲ್ ಅವರ ರಾಜತಾಂತ್ರಿಕ ಪಾಸ್‌ಪೋರ್ಟ್ ಅನ್ನು ರದ್ದುಗೊಳಿಸುವಂತೆ ಕರ್ನಾಟಕ ಸರ್ಕಾರದಿಂದ ಎಂಇಎ ಪತ್ರವನ್ನು ಸ್ವೀಕರಿಸಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.


33 ವರ್ಷದ ಪ್ರಜ್ವಲ್, ಜೆಡಿಎಸ್ ಮುಖ್ಯಸ್ಥ ಮತ್ತು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಮೊಮ್ಮಗ. ಹಾಸನ ಲೋಕಸಭಾ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿಯಾಗಿದ್ದು, ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪಗಳನ್ನು ಎದುರಿಸುತ್ತಿದ್ದಾರೆ.

## ರಾಜ ನುಡಿ

ಸುರೂಪಿ ಚಿಟ್ಟೆಯಾಗಿ ಪ್ರಸಿದ್ಧಿ ಪಡೆಯೋಕೆ, ಕುರೂಪಿ ಕಂಬಳಿಹುಳು (caterpiller) ವಾಗಿ ಎಲ್ಲಾ ಕೆಲಸವನ್ನು ಶ್ರಮವಹಿಸಿ ಮುಂಚೆಯೇ ಮಾಡಿರಬೇಕು. ಶ್ರಮವೇ ಸುಂದರ.

–ಡಾ. ರಾಜಶೇಖರ ನಾಗೂರ

## ವಚನ ಚಿಂತನ 385



### ಇಷ್ಟಲಿಂಗ – ಕರಸ್ಥಲದ ಜ್ಯೋತಿ

*ಕರಸ್ಥಲದ ಜ್ಯೋತಿಯಿದು. ಕರುವಿಟ್ಟ ಎರಕವಿದು.*
*ಇದರ ನೆಲೆಯ ತಿಳಿದು ನೋಡಿದಡೆ ನಿಜದಾನಂದವು.*
*ಹೊಲಬುದೋರದ ನಿಸ್ಸಂಗದ ಹೊಲಬನರಿದು*
*ಕೂಡಿದಾತನೆ ಶರಣ ಕಾಣಾ! ರಾಮನಾಥ.*
*– ಜೇಡರ ದಾಸಿಮಯ್ಯನವರು*

ಕಲ್ಯಾಣ ಕ್ರಾಂತಿಯ ಸಂದರ್ಭದಲ್ಲಿ ನಾಶವಾದ ಅನೇಕ ವಚನಗಳಲ್ಲಿ ಇಷ್ಟಲಿಂಗ ತಯಾರಿಕೆಯ ಕುರಿತು ಬರೆದ ವಚನಗಳು ಸಹ ನಾಶಹೊಂದಿರುವ ಸಾಧ್ಯತೆಗಳಿವೆ. ಆದ್ಯ ವಚನಕಾರರಾದ ಜೇಡರ ದಾಸಿಮಯ್ಯನವರು ಈ ವಚನದಲ್ಲಿ ಇಷ್ಟಲಿಂಗವನ್ನು ಕರಸ್ಥಲದ ಜ್ಯೋತಿ ಎಂದು ಕರೆಯುತ್ತಾ, ಕರುವಿಟ್ಟ ಎರಕವಿದು ಎನ್ನುವಲ್ಲಿ ಇಷ್ಟಲಿಂಗಕ್ಕೆ ಬಳಸುವ ಕಂತೆಯ ಬಗ್ಗೆ ಸುಳುಹೂ ನೀಡಿದ್ದಾರೆ. ಕಂತೆಗೆ ಶಿಲಾರಸ(ಲಬಭಜಡಿ), ಇಂಗಳಿಕ(ಸಿಂಧೂರ–ಗಿಜಡಿಟುಟುಡಿಟ), ರಾಳ(ಖಝುಟ), ಅರಗು(ಜಚಿಟುಟಿರ–ತಿಚಿಥ), ರುಮಾಮಸ್ತಕಿ(ಒಚಿಥಿ–ಣುಥಿ)ಗಳನ್ನು ಬಳಸಲಾಗುತ್ತದೆ. ಇವೆಲ್ಲವುಗಳು ಕಣ್ಣಿನ ರೆಟಿನಾದಿಂದ ಬೆಳಕ(ಚೈತನ್ಯವ)ನ್ನು ಸ್ವೀಕರಿಸಲು ಪೂರಕ ಕಾರ್ಯನಿರ್ವಹಿಸುವಂತಹ ಪ್ರಕಾಶ ಸಂವೇದನಾಶೀಲ ವರ್ಣದ್ರವ್ಯಗಳು. ಇವೆಲ್ಲವುಗಳು ಲಿಂಗಕ್ಕೆ ಹೊಳಪು ನೀಡುತ್ತವೆ. ಆ ಕಾರಣಕ್ಕಾಗಿ ಇಲ್ಲಿ ಕರಸ್ಥಲದ ಜ್ಯೋತಿ ಎಂದಿರುವುದು. ಅಂತಹ ಲಿಂಗವನ್ನು ಅನಿಮಿಷ ದೃಷ್ಟಿಯಿಂದ ನಿರೀಕ್ಷಿಸಿದಾಗ ದೊರೆಯುವ ಆನಂದವನ್ನು ನಿಜದಾನಂದ (ಇದರ ನೆಲೆಯ ತಿಳಿದು ನೋಡಿದಡೆ ನಿಜದಾನಂದವು.) ಎಂದೆನ್ನುತ್ತಾ, ಅಂಗ ಲಿಂಗ ಭೇದ ಮರೆತು ಉಂಟಾಗುವ ಲಿಂಗಾನುಸಂಧಾನವನ್ನು ‘ಹೊಲಬುದೋರದ ನಿಸ್ಸಂಗದ ಹೊಲಬನರಿದು ಕೂಡುವವನೆ ಶರಣ.’ ಇಷ್ಟಲಿಂಗದಿಂದ ಶರಣತ್ವ ಪ್ರಾಪ್ತಿಯಾಗುತ್ತದೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

### ಅಧಿಕಾರಿಗಳಿಂದ ಅಸ್ಕಿ, ಬೆಕಿನಾಳ, ಬೂದಿಹಾಳ(ಪಿ.ಟಿ) ಕೆರೆಗಳಿಗೆ ನೀರು ತುಂಬಿಸುವ ಮನವರಿಕೆ


# ಕೆರೆಗಳಿಗೆ ನೀರು ತುಂಬಿಸುವ ರೈತರ ಹೋರಾಟಕ್ಕೆ ತೆರೆ

**ಉದಯರಶ್ಮಿ ನ್ಯೂಸ್**

ಕಲಕೇರಿ: ಸಮೀಪದ ಆಸ್ಕಿ ಕೆರೆಯಲ್ಲಿ ನೂರಾರು ರೈತರು ಆಸ್ಕಿ, ಬೆಕಿನಾಳ, ಹಾಗೂ ಬೂದಿಹಾಳ ಪಿ.ಟಿ ಕೆರೆಗಳಿಗೆ ನೀರು ತುಂಬಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯಿಂದ ನಡೆಸುತ್ತಿರುವ ಹೋರಾಟದ ಸ್ಥಳಕ್ಕೆ ತಾಳಿಕೋಟಿ ತಹಶಲ್ದಾರರಾದ ಕೀರ್ತಿ ಚಾಲಕ ಮತ್ತು, ಕೆ.ಬಿ.ಜೆ.ಎನ್.ಎಲ್ ಅಧಿಕಾರಿಗಳಾದ ಇಇ ಎಸ್.ಎನ್, ಬಂಡಿವಡರ್, ಸೆಕ್ಷನ ಆಫೀಸರ್ ಪ್ರವೀಣ ಗುಡಗುಂಟಿ ಅವರ ಮಧ್ಯವಸ್ತಿಕೆಯಲ್ಲಿ ಬುಧವಾರ ಸತ್ಯಾಗ್ರಹವನ್ನು ಹಿಂಪಡೆಯಲಾಯಿತು.

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ನೀತಿ ಸಂಹಿತೆ ಇರುವುದರಿಂದ ಜೂನ 6ರ ನಂತರ ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳೊಡನೆ ಚರ್ಚಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು, ಜಿಲ್ಲಾಧಿಕಾರಿಗಳು, ಕೆ.ಬಿ.ಜೆ.ಎನ್.ಎಲ್ ಅಧಿಕಾರಿಗಳೊಂದಿಗೆ ಸಭೆ ಮಾಡಿ ಅಧಿಕೃತವಾಗಿ ಯಾವ ರೀತಿ ಈ 3 ಕೆರೆಗಳನ್ನು ತುಂಬಿಸಬೇಕು ಎಂದು ತಜ್ಞರಿಂದ ಸಮೀಕ್ಷೆ ಮಾಡಿಸಿ ನಂತರದಲ್ಲಿ ಒಂದು ನಿರ್ಣಯಕ್ಕೆ ಬರಬಹುದು ಎಂದು ಹೋರಾಟಕ್ಕೆ ಕುಳಿತ ರೈತರೊಡನೆ ಕೀರ್ತಿ ಚಾಲಕ ಅವರು ಮನವರಿಕೆ ಮಾಡಿದ ನಂತರ ಹೋರಾಟವನ್ನು ಹಿಂಪಡೆಯಲಾಯಿತು.

ಈ ವೇಳೆ ತಾಳಿಕೋಟಿ ತಾ ಅಧ್ಯಕ್ಷರಾದ ಶ್ರೀಶೈಲ ವಾಲಿಕಾರ ಮಾತನಾಡುತ್ತಾ ತಹಶಿಲ್ದಾರರ ಅವರ ಮಾತಿಗೆ ಗೌರವ ಕೊಡುತ್ತೇವೆ, ಕೂಡಲೇ ಅಧಿಕಾರಿಗಳೊಡನೆ ಚರ್ಚಿಸಿ ಒಂದು ದಿನಾಂಕವನ್ನು ನಿರ್ಣಯ ಮಾಡಿ ಆಗ ಆಸ್ಕಿ, ಬೆಕಿನಾಳ, ಬೂದಿಹಾಳ ಪಿ.ಟಿ ಗ್ರಾಮದ ಹಿರಿಯ ರೈತ ಮುಖಂಡರೊಡನೆ ಸಭೆಗೆ ಬಂದು ಶಾಶ್ವತವಾದ ತಿರ್ಮಾನಕ್ಕೆ ಬರೋಣ, ಪ್ರತಿವರ್ಷ ಬೇಸಿಗೆಯಲ್ಲಿ ಈ ಕೆರೆಗಳಿಗೆ ತಪ್ಪದೇ ನೀರು ತುಂಬಿಸುವಂತಾಗಬೇಕು ಎಂದರು





ಈ ವೇಳೆ ಆಸ್ಕಿ ಗ್ರಾಮದ ರೈತ ಸಂಘದ ಅಧ್ಯಕ್ಷ ಸಂಗನಗೌಡ ಬಿರಾದಾರ, ರೈತ ಸಂಘದ ತಾ. ಉಪಾಧ್ಯಕ್ಷ ಗೌಡಪ್ಪಗೌಡ ಹಳಿಮನಿ ಡಾ॥ ಪ್ರಭುಗೌಡ ಬಿರಾದಾರ, ಉಪಾಧ್ಯಕ್ಷರಾದ ಶರಣಗೌಡ ಬಿರಾದಾರ, ತಾ. ಸಂಚಾಲಕರಾದ ಮಹಿಬೂಬ ಗೊಬ್ಬರಡಗಿ, ಗ್ರಾ.ಪಂ ಉಪಾಧ್ಯಕ್ಷ ಅಯ್ಯಪ್ಪ ಮುಗಳಿ, ರಾಮನಗೌಡ ಚೌದ್ರಿ, ಮಲ್ಲಪ್ಪ ಅಂಗಡಿ, ಮುತ್ತು ಹೂಗಾರ, ಗುರನಗೌಡ ಬಿರಾದಾರ, ಮಂಜು ಪಡಶೆಟ್ಟಿ, ಮಹದೇವಪ್ಪ ಮಾದರ, ವೆಂಕಣ್ಣ ಗುತ್ಯಾಳ, ಬಸವರಾಜ ಹಡಪದ, ಶಾಂತಗೌಡ ಬಿರಾದಾರ, ಪ್ರಭುಗೌಡ ಬಿರಾದಾರ, ಪ್ರಭುಗೌಡ ಹಳಿಮನಿ, ಶಂಕರ ಮಗದಾಳ, ದೇವಿಂದ್ರ ತುರಕನಗೇರಿ, ಬೆಕಿನಾಳ ಗ್ರಾಮದ ದೇವಿಂದ್ರಪ್ಪಗೌಡ ಪಾಟೀಲ, ಶ್ರೀಶೈಲ ಸಜ್ಜನ, ಮಲ್ಲಪ್ಪ ಮುದನೂರ, ಶ್ರೀಶೈಲ ಹಿರೇಮಠ, ರಾಮನಗೌಡ ಕರಕಳ್ಳಿ, ಲಕ್ಷ [illegible]ಣ ಚಲವಾದಿ, ಮರಲಿಂಗಪ್ಪ ನಾಟಿಕಾರ, ಮಡಿವಾಳಪ್ಪ ಸಜ್ಜನ, ಬೂದಿಹಾಳ ಗ್ರಾಮದ ಬಸನಗೌಡ ಪಾಟೀಲ, ಸಂತೋಷ ಕುಳಗೇರಿ, ಭೀಮನಗೌಡ ಬಿರಾದಾರ, ಶರಣಪ್ಪ ಹಯ್ಯಾಳ, ಜಟ್ಟೆಪ್ಪ ಮಾದರ ಸೇರಿದಂತೆ ಅನೇಕರು ಇದ್ದರು

# ತಿಕೋಟಾ: ರೈತರ ವಿವಿಧ ಸಮಸ್ಯೆ ಬಗೆಹರಿಸಲು ರೈತಸಂಘ ಆಗ್ರಹ

**ಉದಯರಶ್ಮಿ ನ್ಯೂಸ್**

ತಿಕೋಟಾ: ತಾಲೂಕಿನ ರೈತರ ವಿವಿಧ ಸಮಸ್ಯೆಗಳನ್ನು ಬಗೆಹರಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಪದಾಧಿಕಾರಿಗಳು ತಿಕೋಟಾ ತಹಶಿಲ್ದಾರ ಸುರೇಶ ಮುಂಜೆ ಅವರಿಗೆ ಮನವಿ ಸಲ್ಲಿಸಿ ಕೂಡಲೇ ಬಗೆಹರಿಸಬೇಕು. ಇಲ್ಲವಾದಲ್ಲಿ ತಹಶಿಲ್ದಾರರ ಕಛೇರಿಗೆ ಮುತ್ತಿಗೆ ಹಾಕಿ ಹೋರಾಟ ಮಾಡಲಾಗುವುದು ಎಂದು ಆಗ್ರಹಿಸಿದರು.

ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಮನವಿ ಸಲ್ಲಿಸಿ ಮಾತನಾಡುತ್ತಾ, ತಾಲೂಕಿನಲ್ಲಿ ಮುಂಗಾರು, ಹಿಂಗಾರು ಸಂಪೂರ್ಣ ನಷ್ಟಗೊಂಡಿರುವ ಹಿನ್ನಲೆಯಲ್ಲಿ ವಿಫತ್ತು ನಿರ್ವಹಣಾ ಕಾನೂನಿನಡಿ ಪ್ರತಿ ಹೆಕ್ಟರಗೆ 8500 ರಾಜ್ಯ ಮತ್ತು 8500 ಕೇಂದ್ರದ ಪರಿಹಾರ ಗರಿಷ್ಟ 2 ಹೆಕ್ಟರೆಗೆ ಪರಿಹಾರ ಹಾಕಬೇಕು, ಆದರೆ ಕೇಂದ್ರ ಸರಕಾರ ನೀಡಿದ ಪರಿಹಾರದಲ್ಲಿಯೇ 2000 ಕಡಿತ ಮಾಡಿರುವುದು ಖಂಡನೀಯ, ಅದನ್ನು ಕೂಡಲೇ ರಾಜ್ಯ ಸರಕಾರ 2000+8500 ಸೇರಿಸಿ ಒಟ್ಟಾರೆ 10500 ರೈತರ ಪ್ರತಿ ಹೆಕ್ಟರಗೆ ಹಾಕಬೇಕು. ಬರಗಾಲ ಪರಿಹಾರ ಸಮೀಕ್ಷೆ ಸರಿಯಾಗಿ ಮಾಡದೇ, ಬೇಜವಾಬ್ದಾರಿಯಿಂದ ಹೊರಗುತ್ತಿಗೆ ಮೂಲಕ ಮನಸ್ಸಿಗೆ ಬಂದ ಹಾಗೆ ಸರ್ವೇ ಮಾಡಿ ಕೈತೊಳೆದುಕೊಂಡಿದ್ದಾರೆ, ಆದರೆ ನಿಜವಾಗಿ ತಾಲೂಕಿನ ಎಲ್ಲಾ ನಷ್ಟಗೊಂಡ ರೈತರಿಗೆ ಪರಿಹಾರ ಒದಗಿಸಬೇಕು, ಅದನ್ನು ಮತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಿಸಿ ಆಗಿರುವ ಸಮಸ್ಯೆಯನ್ನು ಕೂಡಲೇ ಬಗೆಹರೆಸಿ ಎಲ್ಲಾ ರೈತರಿಗೂ ಪರಿಹಾರ ನೀಡಬೇಕು ಎಂದರು.



ತಾಲೂಕಾ ಅಧ್ಯಕ್ಷ ಸಾತಲಿಂಗಯ್ಯ ಸಾಲಿಮಠ ಮಾತನಾಡುತ್ತಾ, ಮುಂಗಾರು ಕೆಲವೇ ದಿನಗಳಲ್ಲಿ ಪ್ರಾರಂಭವಾಗುತ್ತಿರುವುದರಿಂದ ತಾಲೂಕಿನ ರೈತ ಸಂಪರ್ಕ ಕೇಂದ್ರಗಳಲ್ಲಿ ಗುಣಮಟ್ಟದ, ಬಿತ್ತನೆ ಬೀಜ, ಗೊಬ್ಬರ, ಕೀಟನಾಶಕ ಹಾಗೂ ಯಂತ್ರೋಪಕರಣಗಳನ್ನು ಅವಶ್ಯಕತೆಗೆ ಅನುಗುಣವಾಗಿ ಸರಿಯಾದ ಸಮಯಕ್ಕೆ ಸಂಗ್ರಹಿಸಿಟ್ಟುಕೊಳ್ಳಬೇಕು. ಮಾರುಕಟ್ಟೆಯಲ್ಲಿ ಅತೀ ಹೆಚ್ಚಿನ ಬೆಲೆಗೆ ಬಿತ್ತನೆ, ಬೀಜ, ಗೊಬ್ಬರ, ಕೀಟನಾಶಕಗಳನ್ನು ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು, ತಾಲೂಕಿನಲ್ಲಿ ವಿಜಿಲೆನ್ಸ್ ತಂಡವನ್ನು ಜಾಗೃತಗೊಳಿಸಿ ಕಾರ್ಯರೂಪಕ್ಕೆ ಬರುವಂತೆ ಆದೇಶಿಸಬೇಕು ಎಂದರು.

ತಾಲೂಕಾ ಉಪಾಧ್ಯಕ್ಷ ಶಾನುರ ನಂದರಗಿ, ಮಾತನಾಡುತ್ತಾ, ಮುಂಗಾರು ಪ್ರಾರಂಭವಾಗುವ ಅಡಿಯಲ್ಲಿ ಎಲ್ಲಾ ರೈತರು ಜಮೀನುಗಳಿಗೆ ಹೋಗುವ ಮಾರ್ಗದಲ್ಲಿ ದಾರಿ ಹದಗೆಟ್ಟು, ಕಂಠಿ ಬೆಳೆದು ಸಾಕಷ್ಟು ಅನಾನುಕೂಲವಾಗುತ್ತಿವೆ, ಅವುಗಳನ್ನು ಕೂಡಾ ಸರಿಪಡಿಸಿ ಸ್ವಚ್ಛಗೊಳಿಸಬೇಕು,

ಹಿಂದಿನ ಸರಕಾರ ವಿದ್ಯುತ್ ಇಲಾಖೆಯಡಿ ರೈತರ ಪಂಪಸೆಟಗಳಿಗೆ 25000 ಕೊಡುತ್ತಿತ್ತು, ಈಗ ನಿಲ್ಲಿಸಿದ್ದು ಈಗ ಸುಮಾರು 2 ಲಕ್ಷ ಹಣ ಕಟ್ಟುವಂತೆ ಹೇಳುತ್ತಿದ್ದಾರೆ, ಇದು ರೈತರು ಮತ್ತು ಕೃಷಿಯನ್ನು ದೀವಾಳಿ ಎಬ್ಬಿಸುವ ಯೋಜನೆ ಆಗಿದೆ ಅದು ಕೂಡಾ ನಿಲ್ಲಬೇಕು ಎಂದರು.

ತಾಲೂಕಿನಾದ್ಯಂತ ಅನೇಕ ತೋಟದ ವಸ್ತಿಯಿದ್ದು, ಅಲ್ಲಿ ರಾತ್ರಿ ಸಿಂಗಲ್ ಫೇಸ್ ವಿದ್ಯುತ್ ಕೊಡಬೇಕೆನ್ನುವುದು ಎಲ್ಲರ ಬೇಡಿಕೆಯಾಗಿದೆ, ರಾತ್ರಿ ಹೊತ್ತು ಅಭ್ಯಾಸ ಮಾಡಲು, ದನಕರುಗಳಿಗೆ ಮೇವು ಹಾಕಲು ಹೋದಾಗ ಹುಳಹುಪ್ಪಡಿಗಳು ಕಡಿದು ಸಾವುಗಳು ಸಂಭವಿಸಿರುವುದು ಇದೆ, ಕಾರಣ ರಾತ್ರಿ ಸಿಂಗಲ್ ಫೇಸ್ ನೀಡಬೇಕು ಎಂದು ಆಗ್ರಹಿಸಿದರು.

ಹೊನವಾಡ ಗ್ರಾಮ ಅಧ್ಯಕ್ಷ ಹಣಮಂತ ಬ್ಯಾಡಗಿ ಮಾತನಾಡಿದರು.

ಈ ವೇಳೆ ಗೌರವಾಧ್ಯಕ್ಷ ಗಿರೀಶ ಕುಲಕರ್ಣಿ, ಮಹಿಳಾ ಅಧ್ಯಕ್ಷೆ ಸಂಗೀತಾ ರಾಠೋಡ, ಜಿಲ್ಲಾ ಸಂಚಾಲಕ ನಜೀರ ನಂದರಗಿ, ತಾ ಸಂಚಾಲಕ ಮಹಾದೇವ ಕದಮ, ಕಲಕೇರಿ ಹೊಬಳಿ ಅಧ್ಯಕ್ಷ ಮಹಿಬೂಬ ಬಾಷಾ ಮನಗೂಳಿ, ಹೊನವಾಡ ಸಂಚಾಲಕ ಖಾದರ ವಾಲಿಕಾರ, ಪ್ರದಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಗುಗ್ಗರಿ, ಕಾಶಿನಾಥ ದೇವನಾಯಕ, ಮಲ್ಲಿಕಾರ್ಜುನ ಗುಗ್ಗರಿ, ಸಿದ್ದಪ್ಪ ಕೊಟ್ಟಲಗಿ, ಸುಧಾಕರ ನಲವಡೆ, ಆಮೀನಸಾಬ ತಿಕೋಟಿ , ವಿಲಾಸ ಮಾನವ, ಅರ್ಜುನ ಸಾಳ್ವಂಕೆ, ಉಮೇಶ ಕದಮ, ಗಂಗಾರಾಮ ಪವಾರ, ಶ್ರೀಕಾಂತ ಪವಾರ, ಸಿದ್ದರಾಯ ಗಗನಮಾಲಿ ಸೇರಿದಂತೆ ಅನೇಕರು ಇದ್ದರು.

# ಪ್ರತಿಭಾನ್ವಿತ ವಿದ್ಯಾರ್ಥಿನಿಯರಿಗೆ ಉಚಿತ ಊಟ-ವಸತಿ ಸೌಲಭ್ಯ

**ಉದಯರಶ್ಮಿ ನ್ಯೂಸ್**

ಸಿಂದಗಿ: ಪ್ರಸಕ್ತ ಸಾಲಿನಿಂದ ಪಟ್ಟಣದ ಸಾರಂಗಮಠದ ಶ್ರೀ ಪದ್ಮರಾಜ ಫ್ರೀ ಬೋರ್ಡಿಂಗ್‌ನಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿನಿಯರಿಗೆ ಉಚಿತ ಊಟ ಮತ್ತು ವಸತಿ ಸೌಲಭ್ಯ ಒದಗಿಸಲಾಗುವುದು. ಗ್ರಾಮೀಣ ಭಾಗದ 5,6,7 ಹಾಗೂ 8ನೆಯ ತರಗತಿಯ ವಿದ್ಯಾರ್ಥಿನಿಯರಿಗೆ ಹೆಚ್ಚಿನ ಅವಕಾಶಗಳನ್ನು ಕಾಯ್ದಿರಿಸಲಾಗಿದೆ. ಸಿಬಿಎಸ್‌ಸಿ ಮತ್ತು ರಾಜ್ಯ ಪಠ್ಯಕ್ರಮದ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಕಲಿಯುವ ವಿದ್ಯಾರ್ಥಿನಿಯರಿಗೆ ಮಾತ್ರ ಅವಕಾಶ. ಗ್ರಾಮೀಣ ಭಾಗದ ವೀರಶೈವ ಲಿಂಗಾಯತ ವಿದ್ಯಾರ್ಥಿನಿಯರು ಆಂಗ್ಲ ಮಾಧ್ಯಮ ಶಾಲೆಯಲ್ಲಿ ಕಲಿಯಲು ಸಮಸ್ಯೆಯಿರುವ ಕಾರಣ ಅವರಿಗೆ ಉಚಿತ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದು ಶ್ರೀ ಸಾರಂಗಮಠದ ಫ್ರೀ ಬೋರ್ಡಿಂಗ್ ಸಾರಂಗಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ವ್ಯವಸ್ಥೆ ಕಡ್ಡಾಯವಾಗಿ ವೀರಶೈವ ಲಿಂಗಾಯತ ವಿದ್ಯಾರ್ಥಿನಿಯರಿಗೆ ಮಾತ್ರವಿರುತ್ತದೆ. ಈ ಸಂಸ್ಥೆಯಲ್ಲಿ ಪ್ರವೇಶ ಪಡೆಯಲು ಪರೀಕ್ಷೆ ಬರೆಯುವುದು ಕಡ್ಡಾವಾಗಿದೆ. ಪರೀಕ್ಷೆಯು ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ವಿಯಜಪುರ ರಸ್ತೆಯ ಕಾಲೇಜು ಕ್ಯಾಂಪಸ್‌ನಲ್ಲಿ ಜೂ.09ರಂದು ಬೆಳಿಗ್ಗೆ 11ಗಂಟೆಗೆ ಜರುಗಲಿದೆ. ಹೆಚ್ಚಿನ ಮಾಹಿತಿಗಾಗಿ ಇಚ್ಛೆಯುಳ್ಳವರು ಡಾ.ಶರಣಬಸವ ಜೋಗುರ, ಚನ್ನಬಸವ ಕತ್ತಿ, ವೀರೇಶ ಜೋಗುರ 9845333093/9945952599/9483376984 ಸಂಪರ್ಕಿಸಿ ಮೇಲಿನ ನಂಬರ್‌ಗಳ ವ್ಯಾಟ್ಸ್ ಮೂಲಕ ಅರ್ಜಿ ನಮೂನೆ ಪಡೆಯಬೇಕು ಮತ್ತು ಅರ್ಜಿ ಸಲ್ಲಿಸಲು ಜೂ.06 ಕೊನೆಯ ದಿನಾಂಕವಾಗಿದೆ.



# ಸರಕಾರಿ ಶಾಲೆಗಳ ಕುರಿತ ಅಸಡ್ಡೆ ಬೇಡ :ಪ್ರಭು ಶ್ರೀ

**ಉದಯರಶ್ಮಿ ನ್ಯೂಸ್**




ಚಿಮ್ಮಡ: ಸರಕಾರಿ ಶಾಲೆಗಳೆಂದರೆ ಕೊಳಕು, ಅಲ್ಲಿ ಕಲಿಯುವವರು ಅಸಮಥ-ರ್ರು ಎಂಬ ಮಾನಸಿಕ ಭಾವನೆ ಹೊಂದಿರುವ ಪಾಲಕರಿಗೆ ಪ್ರಸಕ್ತ ಎಸ್‌ಎಸ್‌ಎಲ್‌ಸಿ ಫಲಿತಾಂಶ ಎಚ್ಚರಿಸಿದೆ. ಸರಕಾರಿ ಶಾಲೆಗಳ ಕುರಿತ ಅಸಡ್ಡೆ ಭಾವನೆ ಬೇಡ ಎಂದು ಸ್ಥಳಿಯ ವಿರಕ್ತಮಠದ ಪ್ರಭು ಶ್ರೀ ಹೇಳಿದರು.

ಗ್ರಾಮದ ಬನಶಂಕರಿದೇವಿ ಕಲ್ಯಾಣ ಮಂಟಪದಲ್ಲಿ ಶ್ರೀ ಬನಶಂಕರಿದೇವಿ ಸೇವಾ ಸಮಿತಿಯಿಂದ ಗುರುವಾರ ರಾತ್ರಿ ಹಮ್ಮಿಕೊಳ್ಳಲಾಗಿದ್ದ "ಪ್ರತಿಭಾ ಪುರಸ್ಕಾರ" ಕಾರ್ಯಕ್ರಮದಲ್ಲಿ ಸಾನಿಧ್ಯವಹಿಸಿ ಮಾತನಾಡಿದ ಅವರು ಪ್ರತೀ ಮಗುವಿನಿಂದ ಲಕ್ಷಾಂತರ ರೂ. ದೇಣಿಗೆ (ಡೊನೇಷನ್) ಪಡೆದುಕೊಂಡು, ಕಲಿಯುವ ಸಾಮರ್ಥ್ಯವಿರುವ ಮಕ್ಕಳನ್ನು ಮಾತ್ರ ನೊಂದಾಯಿಸಿಕೊಳ್ಳುವ ಖಾಸಗೀ ಶಾಲೆಗಳೂ ಮಾಡದಷ್ಟು ಸಾಧನೆ ನಮ್ಮ ಸರಕಾರಿ ಶಾಲೆಗಳು ಸಾಧಿಸಿದ್ದು ಅಧಿಕಾರಿಗಳು, ರಾಜ-ಕಾರಣಿಗಳು ತಮ್ಮ ಮಕ್ಕಳನ್ನು ಸರಕಾರಿ ಶಾಲೆಗಳಲ್ಲಿ ಕಲಿಸಿದರೆ ಶಾಲೆಗಳು ಮತ್ತಷ್ಟು ಸುಧಾರಣೆ ಕಾಣಲಿವೆಯಲ್ಲದೇ ಅಭೀವೃದ್ದಿಯೂ ಹೊಂದಲಿವೆಯೆಂದರು.

ಸಾಧು ಮಹಾರಾಜರ ಮಠದ ಶ್ರೀ ಜನಾರ್ಧನ ಮಹಾರಾಜರು ಮಾತನಾಡಿ ವಿದ್ಯೆ ಕಸಿಯಲಾಗದ ಸಂಪತ್ತು, ಸಾಧಿಸುವ ಛಲವಿದ್ದವರಿಗೆ ಯಾವುದೇ ಸಮಸ್ಯೆ ಅಡ್ಡಿಯಾಗದು, ಎರಡೂ ಕಾಲಿಲ್ಲದವರೂ ಎವರೆಷ್ಟ ಶಿಖರವೇರಿದ ಇತಿಹಾಸ ದೇಶ ಹೊಂದಿದೆ ಎಂದರು.

ಸಮಾಜದ ಮುಖ್ಯಸ್ಥ ಅಶೋಕ ಧಡೂತಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾ.ಪಂ. ಸದಸ್ಯ ಮನೋಜ ಹಟ್ಟಿ, ನಿವೃತ ಮುಖ್ಯೋಪಾದ್ಯಾಯ ಕಲ್ಲಪ್ಪ ವಿಜಾಪೂರ, ಪ್ರವೀಣ ಮೈತ್ರಿ ಮಾತನಾಡಿದರು.

ಸೇವಾ ಸಮೀತಿಯ ಅಧ್ಯಕ್ಷ ಚಂದ್ರಕಾಂತ ಜಾಡಗೌಡರ, ಪ್ರಮುಖರಾದ ರಾಮಣ್ಣ ಮುಗಳಖೋಡ, ಅಣ್ಣಪ್ಪಗೌಡ ಪಾಟೀಲ ವೇದಿಕೆಯಲ್ಲಿದ್ದರು. ಇದೇ ಸಂದರ್ಬದಲ್ಲಿ ಪಿಯೂಸಿ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ಹದಿನೈದು ವಿದ್ಯಾರ್ಥಿಗಳನ್ನು ಸತ್ಕರಿಸಿ ನಗದು ಧನಸಹಾಯ ನೀಡಿ ಪುರಸ್ಕರಿಸಲಾಯಿತು.

# ಬೌದ್ಧ ಧಮ್ಮ ಉಳಿವಿಗೆ ಉಪಾಸಕರ ಮೇಲೆ ದೊಡ್ಡ ಜವಾಬ್ದಾರಿ :ಜೆ.ಎಸ್.ಪಾಟೀಲ

**ಉದಯರಶ್ಮಿ ನ್ಯೂಸ್**




ವಿಜಯಪುರ: ಭಾರತದಲ್ಲಿ ಹುಟ್ಟಿ ಇಡೀ ವಿಶ್ವದಲ್ಲಿ ಹರಡಿರುವ ತಥಾಗತ ಗೌತಮ ಬುದ್ಧರ ಬೌದ್ಧ ಧಮ್ಮವನ್ನು ಉಳಿಸಲು ಮತ್ತು ಅದನ್ನು ಬೆಳೆಸಲು ಧಮ್ಮದ ಉಪಾಸಕರ ಮೇಲೆ ಬಹು ದೊಡ್ಡ ಜವಾಬ್ದಾರಿ ಇದೆ ಎಂದು ಚಿಂತಕ ಜೆ. ಎಸ್. ಪಾಟೀಲ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ನಗರದ ಸಾರಿಪುತ್ರ ಬುದ್ಧ ವಿಹಾರದಲ್ಲಿ ತಥ-ಾಗತ ಗೌತಮ ಬುದ್ಧರ 2568 ನೇ ಜನ್ಮ ಜಯಂತಿ ಪ್ರಯುಕ್ತ ಆಯೋಜಿಸಿದ ಸಮಾರಂಭದಲ್ಲಿ ಮುಖ್ಯ ಉಪನ್ಯಾಸಕರಾಗಿ ಅವರು ಮಾತನಾಡಿದ ಅವರು, ಜಗತ್ತಿಗೆ ಶಾಂತಿ ಸಂದೇಶ ಸಾರಿದ ಮಹಾನ್ ಚೇತನ ಗೌತಮ್ ಬುದ್ಧರನ್ನು ನಮಗೆಲ್ಲ ಪರಿಚಯಿಸಿದವರು ಭೋದಿಸತ್ವ ಬಾಬಾಸಾಹೇಬ ಅಂಬೇಡ್ಕರವರು. ಅವರು ತೋರಿದ ಬುದ್ಧರ ಮಾರ್ಗ ನಮಗೆಲ್ಲ ಇಂದು ವಿಮೋಚನೆಗೆ ಬಹುದೊಡ್ಡ ಸಾಧನವಾಗಿದೆ. ಭಾರತ ಜಗತ್ತಿಗೆ ಬೆಳಕಾಗಿ ವಿಶ್ವಕ್ಕೆ ಗುರುವಾಗಿ ಕಂಡಿದ್ದು ಬುದ್ಧರ ಜ್ಞಾನದ ಕಾರಣಕ್ಕಾಗಿ ಜಗತ್ತಿನ ಪ್ರಥಮ ವಿಜ್ಞಾನಿ ಕಾರಣ ಹಾಗೂ ಪರಿಣಾಮದ ತತ್ವವನ್ನು ತಿಳಿಸಿದ ಮೊದಲ ವಿಜ್ಞಾನಿ ಗೌತಮರು ಎಂದು ಹೇಳಿದರು.

ಬಾಬಾಸಾಹೇಬ್ ಅಂಬೇಡ್ಕರ್ ಕಂಡ ಪ್ರಬುದ್ಧ ಭಾರತ ಕನಸನ್ನು ನನಸು ಮಾಡುವ ಜವಾಬ್ದಾರಿ ಅವರ ಅನುಯಾಯಿಗಳ ಮೇಲೆ ಅಷ್ಟೆ ಅಲ್ಲದೇ ಧಮ್ಮದ ಉಪಾಸಕರ ಮೇಲೆಯೂ ಇದೆ ಎಂದು ಜೆ. ಎಚ್. ಪಾಟೀಲ ಹೇಳಿದರು.

ಈ ವೇಳೆ ಯೋಗ ಗುರುಗಳಾದ ಮಡಿವಾಳಪ್ಪ ದೊಡ್ಡಮನಿಯವರನ್ನು ಸನ್ಮಾನಿಸಲಾಯಿತು.

ಸಮಾರಂಭದ ಅಧ್ಯಕ್ಷತೆಯನ್ನು ಬೌದ್ಧ ವಿಹಾರ ನಿರ್ಮಾಣ ಸಮಿತಿ ಅಧ್ಯಕ್ಷ ರಾಜಶೇಖರ ಯಡಹಳ್ಳಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಭಾರತೀಯ ಬೌದ್ಧ ಮಹಾಸಭೆಯ ಬಸವರಾಜ ಚಲವಾದಿ, ಅನ್ನಪೂರ್ಣ ಬೆಳ್ಳೇನ್ನವರ, ಎಂ. ಪಿ. ದೊಡ್ಡಮನಿ, ಅಲ್ಲದೇ ಹಲವು ಮುಖಂಡರು, ಉಪಾಸಕರು ಸಮಾರಂಭದಲ್ಲಿ ಭಾಗವಹಿಸಿದ್ದರು. ವೆಂಕಟೇಶ್ ವಗ್ಗೆನವರ ಅವರು ಸಮಾರಂಭದ ನಿರೂಪಿಸಿ, ವಂದಿಸಿದರು.

# ಶಿಕ್ಷಕರ ರೂ.3ಲಕ್ಷಕ್ಕೂ ಅಧಿಕ ಹಣ ದೋಚಿದ ಖದೀಮರು

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಬ್ಯಾಂಕ್ ನಲ್ಲಿದ್ದ ಹಣ ಡ್ರಾ ಮಾಡಿಕೊಂಡು ಬೈಕ್ ನಲ್ಲಿಟ್ಟು ಎಳೆನೀರು ಕುಡಿಯುವಷ್ಟರಲ್ಲಿ ಖದೀಮರು ಹಣ ದೋಚಿ ಪರಾರಿಯಾಗಿರುವ ಘಟನೆ ಪಟ್ಟಣದ ಹುಡಕೋ ಗೇಟ್ ಬಳಿ ಬುಧವಾರ ಸಂಭವಿಸಿದೆ.

ಪಟ್ಟಣದ ನಿವಾಸಿಯಾಗಿರುವ ಶಿಕ್ಷಕರೊಬ್ಬರು ಮನೆ ಕಟ್ಟಿಸಲು ಅವಶ್ಯವಾಗಿರುವ 3ಲಕ್ಷಕ್ಕೂ ಅಧಿಕ ಹಣವನ್ನು ದಂಪತಿ ಸಮೇತ ಪಟ್ಟಣದ ಹುಡ್ಕೋ ಬಡಾವಣೆಯಲ್ಲಿರುವ ಕರ್ನಾಟಕ ಬ್ಯಾಂಕ್ ಗೆ ತೆರಳಿ ಮಧ್ಯಾಹ್ನ ಡ್ರಾ ಮಾಡಿಕೊಂಡಿದ್ದರು. ಆ ಹಣವನ್ನು ತಮ್ಮ ದ್ವಿ ಚಕ್ರ ವಾಹನದ ಹಿಂಬದಿ ಇರುವ ಬ್ಯಾಗ್ ನಲ್ಲಿಟ್ಟು ಎಳೆನೀರು ಕುಡಿಯಲೆಂದು ಮುಖ್ಯ ರಸ್ತೆಯಲ್ಲಿಯೇ ಬೈಕ್ ನಲ್ಲಿಸಿ ಎಳೆನೀರು ಖರೀದಿಸಲು ಪತಿ ತೆರಳಿದರೆ, ಹತ್ತಿರವಿರುವ ಬೇಕರಿಯಲ್ಲಿ ತಿನಿಸು ತರಲು ಪತ್ನಿ ತೆರಳಿದ್ದಾರೆ. ಬ್ಯಾಂಕ್ ನಿಂದಲೇ ಇವರನ್ನು ಬೆನ್ನಟ್ಟಿದ ಖದೀಮರ ತಂಡ ಬೈಕ್ ಹತ್ತಿರ ಯಾರೂ ಇಲ್ಲದ್ದನ್ನು ಗಮನಿಸಿ ಸಲೀಸಾಗಿ ಹಣ ತೆಗೆದುಕೊಂಡು ವಿಜಯಪುರ ರಸ್ತೆಯ ಕಡೆಗೆ ಸಾಗಿದ್ದಾನೆ. ಈ ಘಟನೆ ಸಿಸಿಟಿವಿ ಯೊಂದರಲ್ಲಿ ಸೆರೆಯಾಗಿದ್ದು ಬೈಕ್ ನಿಂದ ಹಣ ಎಗರಿಸುವವರೆಗೆ ಕಾಣುತ್ತಿದ್ದು ಮುಖ ಕಂಡಿಲ್ಲ. ಎಳೆನೀರು ಮಾರಾಟಗಾರ ಬಿಸಿಲಿನ ರಕ್ಷಣೆಗೆ ಕಟ್ಟಿದ್ದ ಹಸಿರು ಪರದೆ ಅಡ್ಡಿಯಾಗಿದೆ. ಸಿಸಿಟಿವಿ ಯಲ್ಲಿ ಖದೀಮನ ಕೈಚಳಕ ಮಾತ್ರ ಸೆರೆಯಾಗಿದ್ದು ಪೊಲೀಸರಿಗೆ ಸವಾಲಾಗಿದೆ.

ಕಳೆದ ಕೆಲವು ದಿನಗಳ ಹಿಂದೆ ಪಟ್ಟಣದಲ್ಲಿ ಮನೆಕಳ್ಳತನವಾದಾಗ ಹಣ ಮತ್ತು ಆಭರಣಗಳನ್ನು ಎಲ್ಲಂದರಲ್ಲಿ ಅಸುರಕ್ಷಿತ ಜಾಗದಲ್ಲಿ ಇರಿಸದಂತೆ, ಬೈಕ್ ಕಾರ್ ನಲ್ಲಿಟ್ಟು ಓಡಾಡದಂತೆ ಪೊಲೀಸರು ಅಟೋ ಮೂಲಕ ಜಾಗೃತಿ ಮೂಡಿಸಿದರೂ ಈ ಘಟನೆ ಜನತೆಯ ಅಲಕ್ಷತನವನ್ನು ಸಾಬೀತು ಮಾಡಿದಂತಾಗಿದೆ.

# ದಿ.ಬಾಳುಸಿಂಗ್ ಕುಟುಂಬಸ್ಥರಿಗೆ ಶಾಸಕ ಯತ್ನಾಳ ಸಾಂತ್ವನ

**ಉದಯರಶ್ಮಿ ನ್ಯೂಸ್**



ವಿಜಯಪುರ: ಇತ್ತೀಚೆಗೆ ನಿಧನರಾದ ಜನಸಂಘದ ಹಿರಿಯರು, ತಾಳಿಕೋಟಿ ಪಟ್ಟಣದ ಮುಖಂಡರಾದ ಬಾಳುಸಿಂಗ್ ರಾಮಸಿಂಗ್ ವಿಜಾಪುರ ಅವರ ಮನೆಗೆ ನಗರ ಶಾಸಕ ಬಸನಗೌಡ ರಾ.ಪಾಟೀಲ ಯತ್ನಾಳ ಅವರು ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಜನಸಂಘದ ಕಾಲದಿಂದಲೂ ನಮ್ಮ ಪಕ್ಷದ ಸಂಟನೆಗಾಗಿ ಶ್ರಮಿಸಿರುವುದು, ತಮ್ಮ ಜೊತೆಗಿದ್ದ ಆತ್ಮೀಯ ಒಡನಾಟ ಬಗ್ಗೆ ಕುಟುಂಬದವರೊಂದಿಗೆ ಹಂಚಿಕೊಂಡರು. ಭಾರತೀಯ ಜನತಾ ಪಕ್ಷ ಸಂಘಟನೆಗೆ ಬಾಳುಸಿಂಗ್ ಅವರು ಅಪಾರ ಕೊಡುಗೆ ನೀಡಿದ್ದಾರೆ. ಅವರ ನಿಧನದಿಂದ ಪಕ್ಷಕ್ಕೆ ಅಪಾರ ನಷ್ಟವಾಗಿದೆ ಎಂದರು.

ಈ ಸಂದರ್ಭದಲ್ಲಿ ರಜಪೂತ್ ಸಮಾಜದ ಅಧ್ಯಕ್ಷ ಹರಿಸಿಂಗ್ ಮೂಲಿಮನಿ, ಸುರೇಶ ಹಜೇರಿ, ರತನಸಿಂಗ್ ಕೊಕಟನೂರ, ರಮೇಶ ಗೌಡಗೇರಿ ಸೇರಿದಂತೆ ಬಿಜೆಪಿ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು, ಅಭಿಮಾನಿಗಳು ಇದ್ದರು.

# ಮೇ.27 ಹಾಗೂ 28 ರಂದು ಕ್ಯಾಂಪಸ್ ಸಂದರ್ಶನ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಮೇ.27 ಹಾಗೂ 28 ರಂದು ಬೆಳಗ್ಗೆ 9 ಗಂಟೆಯಿಂದ ರಾಮನಗರದ ಟೊಯೊಟಾ ಕಿರ್ಲೋಸ್ಕರ್ ಪ್ರೈವೇಟ್ ಲಿಮಿಟೆಡ್ ವತಿಯಿಂದ ಎಲೆಕ್ಟ್ರಿಷಿಯನ್, ಎಲೆಕ್ಟ್ರಾನಿಕ್ಸ್, ಮೆಕ್ಯಾನಿಕ್ಸ್, ಫಿಟ್ಟರ್, ಮೇಕ್ಯನಿಸ್ಟ್, ಟರ್ನರ್, ಡೀಸೆಲ್ ಮೆಕ್ಯಾನಿಕ್, ಎಂ ಎಂ ವಿ, ಟಿ ಡಿ ಎಂ ವೃತ್ತಿಯಲ್ಲಿ ತೇರ್ಗಡೆ ಹೊಂದಿದ ಹಾಗೂ ಅಂತಿಮ ವರ್ಷದ ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳಿಗೆ ಕ್ಯಾಂಪಸ್ ಸಂದರ್ಶನ ಆಯೋಜಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಒಂದು ಪ್ರತಿ ತಮ್ಮ ಮಾಹಿತಿ ಹಾಗೂ ಶೈಕ್ಷಣಿಕ ಅರ್ಹತೆಯ ಪ್ರಮಾಣ ಪತ್ರಗಳ ದಾಖಲೆ ಹಾಗೂ ಭಾವಚಿತ್ರ ದೊಂದಿಗೆ ಸಂದರ್ಶನಕ್ಕೆ ಹಾಜರಾಗಿ ಸದುಪಯೋಗ ಪಡಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಸರಕಾರಿ ಐ ಟಿ ಐ ಪ್ರಾಚಾರ್ಯರು, ದೂರವಾಣಿ ಸಂಖ್ಯೆ; 08352-60360 ಅಥವಾ 9886437517 ಕ್ಕೆ ಕರೆಮಾಡಬಹುದು ಎಂದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮೂಕನಾಗಬೇಕು ಜಗದೊಳು ಜ್ವಾಕ್ಯಾಗಿರಬೇಕು

**ಹೆಣ್ಣು ಮಕ್ಕಳಿಗೊಂದು ಪತ್ರ**

**ಉದಯರಶ್ಮಿ ದಿನಪತ್ರಿಕೆ**

**ವೀಣಾಂತರಂಗ**



-ವೀಣಾ ಎಚ್. ಪಾಟೀಲ್, ಮುಂಡರಗಿ

ಪ್ರೀತಿಯ ಮಗಳೇ,

ಅರೆ! ನೆನ್ನೆ ತಾನೆ ನನ್ನನ್ನು ಕಳಿಸಲು ಬಂದ ಅಮ್ಮ ಇಷ್ಟು ಬೇಗ ಪತ್ರ ಬರೆಯಲು ಕಾರಣವೇನು? ಎಂದು ಗಾಬರಿಯಾಗಬೇಡ.. ತಾಯಿ ಹೃದಯದ ಅಳಲು ನಿನಗಿನ್ನೂ ಗೊತ್ತಿಲ್ಲ. ನನ್ನ ಮನದಲ್ಲಿ ಹುದುಗಿಸಿರುವ ಪ್ರೀತಿ, ಮಮತೆ, ಅಕ್ಕರೆ, ಭಯ, ಆತಂಕಗಳ ಕುರಿತು ಇಲ್ಲಿ ಬರೆದಿರುವೆ. ಹಾಗೆಂದು ಇದು ನನ್ನೊಬ್ಬಳ ಅಳಲು ಅಲ್ಲ. ನನ್ನಂತೆ ತಮ್ಮ ಮನೆಯ ಹೆಣ್ಣು ಮಕ್ಕಳನ್ನು ಬೇರೆ ಊರುಗಳಲ್ಲಿ ಓದಲು, ನೌಕರಿ ಮಾಡಲು ಕಳುಹಿಸಿರುವ ಲಕ್ಷಾಂತರ ತಾಯಂದಿರ ಮನದ ಮಾತು.

ನಮ್ಮ ಮನೆಯಂಗಳದಲ್ಲಿ ಚಂದದ ಪ್ರಾಕು ಧರಿಸಿ,ಎರಡು ಪುಟ್ಟ ಜುಟ್ಟು ಹಾಕಿಕೊಂಡು, ಮುಖಕ್ಕೆ ಪೌಡರ್ ಸವರಿ, ಹಣೆಗೆ ಕಾಡಿಗೆಯ ಬೊಟ್ಟುಇಟ್ಟು ಕಾಲಿನ ಗೆಜ್ಜೆಯ ಸದ್ದು ಮಾಡುತ್ತಾ ಪುಟ್ಟ ಪುಟ್ಟ ಹೆಜ್ಜೆ ಇಟ್ಟು ಮನೆಯೆಲ್ಲ ನಡೆಯುತ್ತಿದ್ದ, ಅರಳು ಹುರಿದಂತೆ ಮುದ್ದಾಗಿ ಬಾಯಿ ತುಂಬಾ ಮಾತನಾಡುತ್ತಿದ್ದ ಪುಟ್ಟ ಕಂದ ನೀನು, ಇಂದು ಕಾಲೇಜಿಗೆ ಹೋಗುವಷ್ಟು ದೊಡ್ಡವಳಾಗಿರುವೆ.



ಅತ್ಯುತ್ತಮ ಅಂಕ ಗಳಿಸಿ ಒಳ್ಳೆಯ ಕಾಲೇಜಿನಲ್ಲಿ ಸೀಟು ಗಿಟ್ಟಿಸಿ ಉನ್ನತ ಶಿಕ್ಷಣ ಪಡೆಯುವ ಆಸೆಯಲ್ಲಿ ನಾವು ಮನೆಯವರನ್ನೆಲ್ಲಾ ತೊರೆದು ಹಾಸ್ಟೆಲಿನಲ್ಲಿ ವಾಸವಾಗಲು ಹೋಗುತ್ತಿರುವೆ.

ತುಸುವೇ ಸಂಭ್ರಮ ನಮ್ಮೆಲ್ಲರಲ್ಲಿ ಮನೆ ಮಾಡಿದ್ದರೂ ಹೆಚ್ಚು ಆತಂಕ ಮನದಲ್ಲಿ ಇದೆ. ಕಾಣದ ಊರು, ಅರಿಯದ ಜನ, ಬದಲಾದ ವಾತಾವರಣ ಇದೆಲ್ಲಕ್ಕೂ ನೀನು ಅದು ಹೇಗೋ ಹೊಂದಿಕೊಂಡು ಬಿಡುವೆ ಎಂಬ ಭರವಸೆ ನನಗಿದೆ... ಆದರೆ ನನ್ನ ಭಯ ಅದಲ್ಲ, ಅದರ ಅರಿವಾಗಲು ನೀನು ನಾನಲ್ಲ.

' ಅಯ್ಯೋ ಅಮ್ಮ! ಮತ್ತದೇ ರಾಗ ಆಡಬೇಡ ನೀನು' ಎಂಬ ನಿನ್ನ ಗದರಿಕೆಯ ನಡುವೆಯೂ ಮನ ಆತಂಕದ ಗೂಡಾಗಿದೆ. ನಿನ್ನನ್ನು ಕಳಿಸಲು ಬಂದಾಗ ಹೇಳದ ಮಾತುಗಳನು ಬರೆಯಲೇಬೇಕಾದ, ಬರೆದು ತಿಳಿಸಲೇಬೇಕಾದ ಅನಿವಾರ್ಯತೆ ನನ್ನದು.



ನಮ್ಮ ಮನೆಯ ಪ್ರೀತಿಯ ಕೂಸು ನೀನು.. ಅಜ್ಜ ಅಜ್ಜಿಯ ಚಿನ್ನುವಾಗಿ, ಅಪ್ಪನ ಮುದ್ದಿನ ಮಗಳಾಗಿ, ಅಕ್ಕ-ಅಣ್ಣಂದಿರ ನೆಚ್ಚಿನ ತಂಗಿಯಾಗಿ ನನ್ನ ಕಣ್ಮಣಿಯಾಗಿ ಸುರಕ್ಷಿತವಾದ ಗುಬ್ಬಚ್ಚಿ ಗೂಡಿನಂತಹ ಸಂಸಾರದಲ್ಲಿ ಬೆಳೆದಿರುವ ನಿನಗೆ ಹೊರಗಿನ ನಿಷ್ಠುರ ಪ್ರಪಂಚದ ಅರಿವಿಲ್ಲ. ಹಾಗೆಂದು ಇಡೀ ಜಗತ್ತೇ ಕೆಟ್ಟದು ಎಂದಲ್ಲ. ನನಗೆ ಎಲ್ಲವೂ ಗೊತ್ತಿದೆ ಎಂಬ ಹದಿಹರೆಯದ ಹುಮ್ಮಸ್ಸು, ಸುಣ್ಣದ ತಿಳಿ ನೀರನ್ನು ಕೂಡ ಹಾಲೆಂದು ನಂಬುವ ನಿನ್ನ ಬೋಳೆ ಸ್ವಭಾವ, ಸ್ನೇಹಕ್ಕಿಂತ ಮಿಗಿಲಾದದ್ದು ಬೇರೆ ಯಾವುದೂ ಇಲ್ಲ ಎಂಬ ಸ್ಲೋಗನ್ನಗಳು, ಪ್ರೀತಿ ಮಾಡಬಾರದು, ಮಾಡಿದರೆ ಜಗಕ್ಕೆ ಹೆದರಬಾರದು ಎಂಬ ಧ್ಯೇಯ ವಾಕ್ಯಗಳು

ಜೀವನ ಇರೋದೇ ಎಂಜಾಯ್ ಮಾಡೋಕೆ, ಈ ಹದಿಹರೆಯದ ವಯಸ್ಸು ಮತ್ತೆ ಬರುತ್ತಾ ಎಂಬ ಮಾತುಗಳು ಹೆಚ್ಚು ರುಚಿಸುವ ಸಮಯ ಇದು.

ಯಾವುದೂ ತಪ್ಪಲ್ಲ ನಿಜ..... ಆದರೆ ಅದೆಲ್ಲವೂ ಒಂದು ಮಿತಿಯಲ್ಲಿದ್ದಾಗ ಮಾತ್ರ. ಜೀವನದಲ್ಲಿ ಎಂಜಾಯ್ಮೆಂಟ್ ಇರಬೇಕೆ ಹೊರತು ಎಂಜಾಯ್ಮೆಂಟ್ ಒಂದೇ ಜೀವನದ ಮುಖ್ಯ ಉದ್ದೇಶ ಅಲ್ಲ. ನಮ್ಮ ಬದುಕನ್ನು ವ್ಯವಸ್ಥಿತವಾಗಿ ನಡೆಸಲು ಬೇಕಾಗುವ ವಿದ್ಯೆ, ಆರ್ಥಿಕ ಸ್ವಾವಲಂಬನೆಯನ್ನು ಕೊಡುವ ನೌಕರಿ, ಸಾಮಾಜಿಕ ವಲಯದಲ್ಲಿ ನಿನ್ನದೇ ಆದ ಒಂದು ಒಳ್ಳೆಯ ಗುರುತಿಸುವಿಕೆ ಇವು ಉನ್ನತ ಶಿಕ್ಷಣದ ಮುಖ್ಯ ಧ್ಯೇಯಗಳು.

ಈಗಾಗಲೇ ಬದುಕಿನಲ್ಲಿ ಒಂದು ಮಹತ್ತರ ಘಟ್ಟವನ್ನು ತಲುಪಿರುವ ಸೋದರ ಸಂಬಂಧಿಗಳು ನಾವಂತೂ ಎಂಜಾಯ್ ಮಾಡಲಿಲ್ಲ ನೀವಾದರೂ ಮಾಡಿ ಎಂದು ಲಘುವಾಗಿ ನಿಮಗೆ ಹೇಳಿರುವುದನ್ನು ನೀನು ಗಂಭೀರವಾಗಿ ತೆಗೆದುಕೊಳ್ಳಬೇಡ.... ಓಟದ ನಡುವೆ ಅಲ್ಲೊಂದು ಇಲ್ಲೊಂದು ಅಡೆತಡೆಗಳು ಇದ್ದರೆ ತೊಂದರೆ ಇಲ್ಲ, ಆದ-ರೆ ಆಡೆ ತಡೆಗಳನ್ನೇ ದಾಟುತ್ತ ಮುಂದೆ ಸಾಗುವ ಹೊತ್ತಿಗೆ ನಿನ್ನ ಸಮಯ ವ್ಯರ್ಥವಾಗಬಹುದು, ನಿನ್ನ ಗುರಿ ನಿನ್ನ ಕೈತಪ್ಪಿ ಹೋಗಬಹುದು ಎಂಬುದನ್ನು ಸದಾ ನೆನಪಿನಲ್ಲಿಟ್ಟುಕೋ.

ನಿನ್ನ ಕಾಲೇಜಿನಲ್ಲಿ, ಹಾಸ್ಟೆಲ್ ನಲ್ಲಿ ಎಲ್ಲರೊಂದಿಗೆ ಒಳ್ಳೆಯ ಸ್ನೇಹವನ್ನು ಹೊಂದು ಆದರೆ ಅತಿಯಾದ ನಿರೀಕ್ಷೆ ಇಟ್ಟುಕೊಳ್ಳುವುದು ಬೇಡ. ಸದಾ ಒಂದು ಅಂತರವನ್ನು ಕಾಯ್ದುಕೋ.

ಕಹಿ ಎನಿಸಿದರೂ ಜೀವನದ ಸತ್ಯ ಇದುವೇ. ಕೆಲ ಸ್ನೇಹ ಸಂಬಂಧಗಳು ಜೊತೆಗಿರುವವರೆಗೆ ಮಾತ್ರ.. ಒಂದೇ ಊರಿನವರಾದರೆ ಆಗಾಗ ಪರಸ್ಪರ ಭೇಟಿಯಾಗಿ ಕಷ್ಟ ಸುಖವನ್ನಾದರೂ ಹಂಚಿಕೊಳ್ಳುತ್ತಾರೆ, ಆದರೆ ದೂರದಲ್ಲಿರುವ ಸ್ನೇಹಿತರು ಕೇವಲ ಸಾಮಾಜಿಕ ಜಾಲತಾಣಗಳಲ್ಲಿ ಭೇಟಿಯಾಗುತ್ತಾರೆ ಎಂಬುದನ್ನು ನೀನೇ ನೋಡುತ್ತಿರುವೆಯಲ್ಲ. ಹಾಗೆಂದು ಆ ಸ್ನೇಹದ ಕುರಿತು ತಿರಸ್ಕಾರ ಬೇಡ, ಒಳ್ಳೆಯ ಸ್ನೇಹಗಳು ಒಂದು ಮಧುರ ಅನುಭೂತಿಯಂತೆ ನಿನ್ನೊಂದಿಗೆ ಉಳಿದು ಹೋಗಬೇಕು ನಿಜ.. ದುಸ್ವಪ್ನಗಳಂತಲ್ಲ.

ಜೀವಿತ'ದ' ಕೊನೆಯವರೆಗೂ ನಮ್ಮ ಜೊತೆಗೆ ಬರುವುದು ನಮ್ಮ ಅಪ್ಪ, ಅಮ್ಮ, ಅಣ್ಣ-ತಮ್ಮ, ಅಕ್ಕ- ತಂಗಿ ಮುಂತಾದ ರಕ್ತ ಸಂಬಂಧಗಳು ಮಾತ್ರ. ನಮ್ಮ ಕಷ್ಟ ಸುಖಕ್ಕೆ ನೋವು ನಲಿವಿಗೆ ಜೊತೆಯಾಗುವವರು ನಮವರೇ.



ಕೆಲ ಸ್ನೇಹಗಳು ಇದಕ್ಕೆ ಅಪವಾದ ಇರಬಹುದು.

ನೀನು ಮನೆಯವರನ್ನೆಲ್ಲಾ ಬಿಟ್ಟು ಓದಲು ಹೋಗಿರುವ ಮುಖ್ಯ ಉದ್ದೇಶವನ್ನು ಸದಾ ನೆನಪಿನಲ್ಲಿಡು. ಓದು ಮತ್ತು ಅದಕ್ಕೆ ಸಂಬಂಧಪಟ್ಟ ಕೆಲಸಗಳಲ್ಲಿ ನಿನ್ನನ್ನು ನೀನು ತೊಡಗಿಸಿಕೋ. ಊಟದಲ್ಲಿ ಉಪ್ಪಿನಕಾಯಿ ಇರುವಂತೆ ತಮಾಷೆ, ಜೋಕುಗಳು, ಕಾಲೆಳೆಯುವುದು ಹಿತಮಿತವಾಗಿರಲಿ.... ಆದರೆ ಅದುವೇ ಮುಖ್ಯವಾಗದಿರಲಿ.

ಹಾಸ್ಟೆಲ್ ನಲ್ಲಿ ಕೊಡುವ ಆಹಾರಕ್ಕೆ ನಿನ್ನನ್ನು ನೀನು ಒಗ್ಗಿಸಿಕೊಳ್ಳುವುದನ್ನು ರೂಢಿ ಮಾಡಿಕೋ. ಬೇಕು ಬೇಕೆಂದಾಗ ಊಟ ಮಾಡಲು ಆಗುವುದಿಲ್ಲ. ಆದ್ದರಿಂದ ನಿಗದಿತ ಸಮಯದಲ್ಲಿ ಆಹಾರ ಸೇವಿಸು. ಅಲ್ಲಿ ಕೊಡುವ ಹಸಿ ತರಕಾರಿ ಸೊಪ್ಪುಗಳನ್ನು, ಹಣ್ಣುಗಳನ್ನು ಸೇವಿಸು. ಸಾಧ್ಯವಾದಷ್ಟು ಹೊರಗಿನ ಆಹಾರವನ್ನು ಅವಾಯ್ಡ್ ಮಾಡು. ಹಾಸ್ಟೆಲ್ನ ನಿಯಮಾವಳಿಗಳನ್ನು ಎಂದೂ ಮೀರದಿರು. ಅತಿಯಾಗಿ ರುಚಿಯ ಕಡೆ ಗಮನ ಕೊಡದೆ ಹಿತಮಿತವಾದ ಆಹಾರವನ್ನು ಸೇವಿಸು.

ಖರ್ಚಿನ ವಿಷಯದಲ್ಲಿ ಸ್ವಲ್ಪ ಹುಷಾರಾಗಿರು. ಯಾವುದೇ ಕಾರಣಕ್ಕೂ ಹಣದ ದುರ್ಬಳಕೆ ಬೇಡ. ಅದೆಷ್ಟೇ ಒಳ್ಳೆಯ ಸ್ನೇಹಿತರಾಗಿದ್ದರೂ ಕೂಡ ಯಾರೊಂದಿಗೂ ನಿನ್ನ ಖಾತೆಗೆ ಸಂಬಂಧಪಟ್ಟ ಮಾಹಿತಿಗಳನ್ನು ಮತ್ತು ಎಟಿಎಂನ ಪಾಸ್ವರ್ಡ್ ಅನ್ನು ಹಂಚಿಕೊಳ್ಳಬೇಡ.

ನೀನು ಓದುತ್ತಿರುವೆಡೆಯಲ್ಲಾಗಲಿ, ವಾಸಿಸುತ್ತಿರುವ ಸ್ಥಳದಲ್ಲಾಗಲಿ ಪ್ರತಿ ಬಾರಿಯೂ ನಿನ್ನ ಮಾತೇ ನಡೆಯಬೇಕು ಎಂಬ ಹಟ ಬೇಡ. ಬೇರೆಯವರ ಮಾತಿಗೂ ಬೆಲೆ ಕೊಡು. ಬಹಳಷ್ಟು ಸಲ ನಿಮ್ಮ ಹಾಸ್ಟೆಲ್ ವಾರ್ಡನ್ ಗಳು ನಿಮಗೆ ಹೇಳುವ ಮಾತುಗಳು ಒರಟೆನಿಸಬಹುದು, ಬೇಧ ತೋರುತ್ತಾರೆ ಎಂದು ಕೂಡ ಅನಿಸಬಹುದು.... ಆದರೆ ಅವರು ಕೂಡ ನಿಮ್ಮ ಒಳಿತಿಗಾಗಿ ಮತ್ತು ಸಂಸ್ಥೆಯ ಏಳಿಗೆಗಾಗಿ ದುಡಿಯುತ್ತಿರುವವರು. ನಿಮ್ಮ ಎಲ್ಲ ಆಗುಹೋಗುಗಳಿಗೆ ಜವಾಬ್ದಾರರು ಎಂಬುದು ಸದಾ ನೆನಪಿರಲಿ.

ಇನ್ನು ಮುಖ್ಯವಾಗಿ ನಮ್ಮ ಬದುಕಿನಲ್ಲಿ ಬಾಲ್ಯ, ಯೌವನ, ವೃದ್ಧಾಪ್ಯ ಹೇಗೆ ಒಂದರ ನಂತರ ಒಂದು ಕ್ರಮವಾಗಿ ಬರುತ್ತವೆಯೋ ಹಾಗೆಯೇ ವಿದ್ಯಾರ್ಥಿ ಜೀವನ, ಉದ್ಯೋಗ, ಸಂಗಾತಿ ಮತ್ತು ವಿವಾಹಗಳು ಕೂಡ ಅದೇ ಕ್ರಮದಲ್ಲಿ ಬರಬೇಕು. ಇದರಲ್ಲಿ ಮಧ್ಯದ ಎರಡು ವಿಷಯಗಳು ಹಿಂದು ಮುಂದಾದರೆ ಉಳಿದ ಎರಡು ವಿಷಯಗಳನ್ನು ನಿರೀಕ್ಷಿತ ಮಟ್ಟದಲ್ಲಿ ಸಾಧಿಸಲು ಆಗುವುದಿಲ್ಲ. ಆದ್ದ-ರಿಂದ ಈಗ ಓದುವ ವಯಸ್ಸಿನಲ್ಲಿ ಕೇವಲ ನಿನ್ನ ಓದಿನೆಡೆ ಮಾತ್ರ ನಿನ್ನ ಗಮನವಿರಲಿ. ಹರೆಯದ ಆಕರ್ಷಣೆಗೆ ಒಳಗಾಗಿ ವಿರುದ್ಧ ಲಿಂಗಿಯ ಜೊತೆಗಿನ ಸ್ನೇಹಕ್ಕೆ ಪ್ರೀತಿ ಪ್ರೇಮದ ಬಣ್ಣ ಹಚ್ಚುವುದು ಬೇಡ. ನಿನ್ನ ತಂದೆ ತಾಯಿಯರಿಗೂ ನಿನ್ನ ಸ್ನೇಹಿತರನ್ನು ಪರಿಚಯಿಸಿ ಧೈರ್ಯವಾಗಿ ಮಾತನಾಡಬಲ್ಲಷ್ಟು ನಿಷ್ಕಲ್ಮಶ ಸ್ನೇಹವನ್ನು ಹೊಂದಿದ್ದರೆ ಸಾಕು.

ನಮ್ಮ ಹಿರಿಯರು ಇದ್ದಂತೆ ನಾವಿಲ್ಲ ನಿಜ, ಆದರೆ ನಮ್ಮ ಹಿರಿಯರು ಹಾಕಿಕೊಟ್ಟ ದಾರಿ ನಮಗಿದ್ದೆ ಇದೆ. ಆಧುನಿಕತೆಯ ಸೋಗಿಗೆ ಬಿದ್ದು ನಿನ್ನದಲ್ಲದ ಉಡುಗೆ ತೊಡುಗೆಗಳನ್ನು ಧರಿಸಬೇಡ.ಯಾವ ಉಡುಗೆಯಲ್ಲಿ ನೀನು ಅತ್ಯಂತ ಆರಾಮದಾಯಕವಾಗಿಯೂ ಆತ್ಮವಿಶ್ವಾಸದಿಂದಲೂ ಇರುವೆಯೋ ಅಂತಹ ಉಡುಗೆಯನ್ನೇ ಧರಿಸು. ನೆನಪಿಡು...ನಿನ್ನ ಸಭ್ಯ ಉಡುಗೆಯ ಮೂಲಕ ನೀನು ನಿನ್ನ ಕೌಟುಂಬಿಕ ಸಂಸ್ಕಾರವನ್ನು ಪ್ರತಿನಿಧಿಸುವೆ.

ಮತ್ತೊಂದು ವಿಷಯ ಹೇಳಿದರೆ ನಿನಗೆ ಬೇಸರವಾಗಬಹುದು... ಇತ್ತೀಚೆಗೆ ಕೇಳಿ ಬರುತ್ತಿರುವ ಹೆಣ್ಣು ಮಕ್ಕಳ ಮೇಲಿನ ಬರ್ಬರ ಕೃತ್ಯಗಳು ಹೆತ್ತವರನ್ನು ಆತಂಕಕ್ಕೆ ಈಡು ಮಾಡಿವೆ. ಕ್ಷಣಿಕ ಆಕರ್ಷಣೆ ಬದುಕನ್ನು ನಾಶ ಮಾಡಬಹುದು. ಅದೆಷ್ಟೇ ಕಾಲ ಮುಂದುವರೆದರೂ ಹೆಣ್ಣುಮಕ್ಕಳು ಬಾಳೆ ಎಲೆಯಂತೆ.ಬಾಳೆ ಎಲೆಯ ಮೇಲೆ ಮುಳ್ಳು ಬಿದ್ದರೂ ಮುಳ್ಳಿನ ಮೇಲೆ ಬಾಳೆ ಎಲೆ ಬಿದ್ದರೂ ಹರಿಯುವುದು ಬಾಳೆ ಎಲೆಯೇ ... ಅಂತೆಯೇ ಹೆಣ್ಣು



ತಾನಾಗಿ ಮತ್ತೊಬ್ಬರ ಆಕರ್ಷಣೆಗೆ ಒಳಗಾದರೂ ಮತ್ತೊಬ್ಬರು ಆಕೆಯ ಆಕರ್ಷಣೆಗೆ ಒಳಪಟ್ಟರೂ ಅಪಾಯ ಹೆಣ್ಣಿಗೆ ಎಂಬುದನ್ನು ಎಂದೂ ಮರೆಯಬೇಡ. ಒಂದು ತಪ್ಪು ಹೆಜ್ಜೆ ಜೀವನವಿಡೀ ಪಶ್ಚಾತಾಪಕ್ಕೆ ದಾರಿ ಮಾಡಿಕೊಡುವುದು ಬೇಡ ಎಂಬ ಎಚ್ಚರ ನಿನಗಿದ್ದರೆ ಸಾಕು.

ಬದುಕಿದ್ದರೆ ಏನನ್ನು ಬೇಕಾದರೂ ಸಾಧಿಸಬಹುದು... ಕಳೆದ ಒಂದುವರೆ ತಿಂಗಳಿನಲ್ಲಿ ನಡೆದ ಹೆಣ್ಣು ಮಕ್ಕಳ ಸಾಲು ಸಾಲು ಹತ್ಯೆಗಳನ್ನು ನೋಡಿ ಮನಸ್ಸಿಗೆ ಅನ್ನಿಸಿದ್ದು ಹೀಗೆ. ನಾವು ಕೇವಲ ಹೆಣ್ಣು ಮಕ್ಕಳನ್ನು ನಮ್ಮ ಹಕ್ಕು ಎಂದು ಭಾವಿಸುವ ಅಸಹಿಷ್ಣು ಗಂಡು ಜನಾಂಗವನ್ನು ಹುಟ್ಟು ಹಾಕಿದ್ದು ಪ್ರಸ್ತುತ ಅದರ



ಫಲವನ್ನು ಉಣ್ಣುತ್ತಿದ್ದೇವೆ. ಆದರೆ ಇದಕ್ಕೆ ಬಲಿಯಾಗಿರುತ್ತಿರುವುದು ಪಾಪದ ಹೆಣ್ಣು ಮಕ್ಕಳು. ಅರಿಯದ ವಯಸ್ಸಿನಲ್ಲಿ ಪ್ರೀತಿ ಪ್ರೇಮದ ಗುಂಗಿಗೆ ಬಿದ್ದು, ತಂದೆ ತಾಯಿ ಬುದ್ಧಿ ಹೇಳಿದಾಗ ವಿದ್ಯಾರ್ಥಿ ದೆಸೆಯಲ್ಲಿ ತಾನು ತಪ್ಪು ಮಾಡುತ್ತಿರುವೆ ಎಂಬ ಅರಿವು ಉಂಟಾಗಿ ಪ್ರೀತಿಯಿಂದ ಹಿಂದೆ ಸರಿದ ತಪ್ಪಿಗೆ ಒಂದೊಮ್ಮೆ ತನ್ನನ್ನು ಪ್ರೀತಿಸಿದ ಹುಡುಗನೇ ತನ್ನನ್ನು ಕೊಚ್ಚಿ ಕೊಂದರೆ ಆಕೆಯನ್ನು ಇಷ್ಟು ವರ್ಷಗಳ ಕಾಲ ಲಾಲಿಸಿ ಪಾಲಿಸಿದ ತಂದೆ ತಾಯಿಗಳ ಪಾಡೇನು? ಎಂದು ನೆನೆದಾಗ ಮೈಯಲ್ಲಿ ನಡುಕ ಉಂಟಾಗುತ್ತದೆ. ನಿಮ್ಮ ಬದುಕು ಕೇವಲ ನಿಮ್ಮದಲ್ಲ. ನಿಮ್ಮ ಬದುಕಿನ ಆಗುಹೋಗುಗಳ ಸುತ್ತ ನಿಮ್ಮ ಕುಟುಂಬ ಮತ್ತು ಸಮಾಜ ನಿಮ್ಮೊಂದಿಗೆ ಜೋಡಿಸಲ್ಪಟ್ಟಿರುತ್ತದೆ. ಆದ್ದರಿಂದ ನಿನ್ನ ಹುಷಾ-ರಿನಲ್ಲಿ ನೀನಿರು ಎಂದು ಮಾತ್ರ ಹೇಳುತ್ತೇನೆ. ಸಮಾಜಕ್ಕೆ ಒಳ್ಳೆಯ ಉದಾಹರಣೆಯಾಗದಿದ್ದರೂ ಪರವಾಗಿಲ್ಲ ಆದರೆ ಕೆಟ್ಟ ಉದಾಹರಣೆಯಾಗಬಾರದು ಎಂಬ ಅರಿವಿನ ಪ್ರಜ್ಞೆ ನಿನ್ನಲ್ಲಿ ಸದಾ ಜಾಗೃತವಾಗಿರಲಿ.

ಅಷ್ಟಾಗಿಯೂ ನಿನಗೆ ಏನೇ ತೊಂದರೆಯಾದರೂ ಮುಕ್ತವಾಗಿ ಹೇಳಿಕೋ.... ಒಂದು ಸುಳ್ಳನ್ನು ಮುಚ್ಚಲು ನೂರಾರು ಸುಳ್ಳುಗಳನ್ನು ಹೇಳುವುದರ ಬದಲು ಒಂದು ಸತ್ಯವನ್ನು ಹೇಳಿ ಬೈಸಿಕೊಂಡರೂ ಪರವಾಗಿಲ್ಲ ಮನಸ್ಸು ನಿರಾಳವಾಗಿರುತ್ತದೆ ಎಂಬುದನ್ನು ಅರಿತುಕೋ.

ಬದುಕಿನ ಯಾವುದೇ ಹಂತದಲ್ಲಿಯಾದರೂ ನಮ್ಮ ತೋಳುಗಳ ಆಸರೆ ನಿನಗೆ ಇದ್ದೇ ಇರುತ್ತದೆ... ಆದರೆ ಆ ತೋಳುಗಳಲ್ಲಿ ಕಸುವು ತುಂಬುವ ಕೆಲಸ ಮಾತ್ರ ನಿನ್ನದು. ಅದು ನಿನ್ನ ನಡತೆಯಲ್ಲಿ, ವಿದ್ಯಾಭ್ಯಾಸದಲ್ಲಿ ಮತ್ತು ಶೈಕ್ಷಣಿಕ ಅಭಿವೃದ್ಧಿಯಲ್ಲಿ ಸದಾ ಇರಲೇಬೇಕು.

ನಿನ್ನ ಕುರಿತಾಗಿ ನನ್ನ ಆಸೆ ಆಕಾಂಕ್ಷೆಗಳಿಗೆ ಮಿತಿ ಇಲ್ಲ,ಭಯ ಆತಂಕಗಳು ನಿರಾಧಾರವಾದುದು ಎಂದು ನಿನಗೆ ಅನಿಸಿದರೆ ಅದು ನಿನ್ನ ತಪ್ಪಲ್ಲ. ನನ್ನಂತೆ ನೀನೂ ಕೂಡ ತಾಯಾಗಿ ನಿನ್ನ ಮಕ್ಕಳನ್ನು ಬೆಳೆಸುವಾಗ ನಿನಗೆ ಇದರ ಅನುಭವ ಖಂಡಿತವಾಗಿಯೂ ಆಗುತ್ತದೆ. ಪತ್ರ ತುಸು ದೊಡ್ಡದಾಯಿತು ಆದರೆ ಓದದೆ ಇರಬೇಡ. ನಿನ್ನ ಹಿತದಲ್ಲಿಯೇ ನಮ್ಮ ಕುಟುಂಬದ ಒಳಿತಿದೆ.

ಇಂತಿ ನಿನ್ನನ್ನು ಸದಾ ಪ್ರೀತಿಸುವ

ನಿನ್ನ ಅಮ್ಮ

# ಮಾನವರ ಅಸ್ತಿತ್ವದ ಮೂಲತತ್ವ ಮಾನವೀಯತೆ :ಪೋರವಾಲ

**ಉದಯರಶ್ಮಿ ನ್ಯೂಸ್**

ವಿಜಯಪುರ: ಮಾನವೀಯತೆ ಇದು ಮಾನವರ ಅಸ್ತಿತ್ವದ ಮೂಲತತ್ವವಾಗಿದೆ ಎಂದು ಉದ್ಯಮಿ ಸುಖ್‌ರಾಜ ಪೋರವಾಲ ಹೇಳಿದರು.



ನಗರದ ಬಿಎಲ್‌ಡಿಇ ಆಸ್ಪತ್ರೆಯ ಆವರಣದಲ್ಲಿ ಗುರುವಾರ ಪತ್ನಿ ದಿ:ಸುಂದರದೇವಿ ಅವರ 7ನೇ ಪುಣ್ಯಸ್ಮರಣೆ ನಿಮಿತ್ತ ಆಸ್ಪತ್ರೆಯ ರೋಗಿಗಳ ಸಂಬಂಧಿ ಹಾಗೂ ಸಿಬ್ಬಂದಿಗೆ ಉಪಹಾರ ವಿತರಿಸಿ ಮಾತನಾಡಿದರು.

ನಮ್ಮ ಜೀವನದಲ್ಲಿ ಯಾವುದು ಶಾಶ್ವತವಲ್ಲ. ನಮ್ಮ ಕೆಲವು ಕಾರ್ಯಗಳು ಮಾತ್ರ ಶಾಶ್ವತ ನೆನಪುಗಳಿಗೆ ಕಾರಣವಾಗುತ್ತವೆ. ಕಳೆದ 7 ವರ್ಷದ ಹಿಂದೆ ಪತ್ನಿ ನಿಧನರಾದ ತಕ್ಷಣ ಅವರ ಎರಡು ಕಣ್ಣು ಸೇರಿದಂತೆ ದೇಹವನ್ನು ಆಸ್ಪತ್ರೆಗೆ ದಾನ ಮಾಡಿ ಅವರ ಜೀವನದ ಸಾರ್ಥಕತೆಯನ್ನು ಸಾರಲಾಯಿತು. ನಾವು ಸಹ ಅಷ್ಟೇ ಇದ್ದಷ್ಟು ದಿನ ಉಳಿದವರ ಸೇವೆಗೆ ಸ್ವಲ್ಪ ಕಾಲಾವಕಾಶ ನೀಡೋಣ ಎಂದು ಹೇಳುತ್ತಾ ಇಂದಿನ ಈ ಕಾರ್ಯಕ್ಕೆ ಹೀರಾಚಂದ್ ಗಾಂಧಿ ಪ್ರೇರಣೆ ನೀಡಿದ್ದು ಅವರ ಮಾರ್ಗದರ್ಶನ ಅತ್ಯಂತ ಸಮಯೋಚಿತ ಎಂದರು.

ರಿತೇಶಕುಮಾರ ಪೋರವಾಲ್, ಹೀರಾಚಂದ ಗಾಂಧಿ, ಇಂದುಮತಿ, ನೇಹಾ, ರಿಷಬ್ ಸೇರಿದಂತೆ ಸಮುದಾಯದ ಪ್ರಮುಖರು ಹಾಗೂ ಆಸ್ಪತ್ರೆಯ ಸಿಬ್ಬಂದಿ ಇದ್ದರು.

# ಸಂಭ್ರಮದ ರೇಣುಕಾ ಯಲ್ಲಮ್ಮದೇವಿ ಜಾತ್ರಾಮಹೋತ್ಸವ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ಬಸವ ನಗರದಲ್ಲಿರುವ ರೇಣುಕಾ ಯಲ್ಲಮ್ಮದೇವಿ ಜಾತ್ರಾಮಹೋತ್ಸವ ಗುರುವಾರ ಸಂಭ್ರಮ,ಸಡಗರದಿಂದ ಜರುಗಿತು. ದೇವಿಗೆ ಜಾತ್ರಾಮಹೋತ್ಸವದಂಗವಾಗಿ ವಿಶೇಷ ಪೂಜೆ ನೆರವೇರಿತು. ಜನತೆ ಕುಟುಂಬ ಸದಸ್ಯರೊಂದಿಗೆ ಆಗಮಿಸಿ ದೇವಿಯ ದರ್ಶನ ಪಡೆದು ತಮ್ಮ ಹರಕೆ ಸಲ್ಲಿಸಿದರು.

ಬೆಳಗ್ಗೆ ಜಾತ್ರಾಮಹೋತ್ಸವ ದಂಗವಾಗಿ ರೇಣುಕಾ ಯಲ್ಲಮ್ಮದೇವಿ ದೇವಸ್ಥಾನದಿಂದ ರೇಣುಕಾ ಯಲ್ಲಮ್ಮದೇವಿ ಪಲ್ಲಕ್ಕಿ ಉತ್ಸವವು ಕುಂಭಮೇಳ, ಜೋಗಮ್ಮಗಳ ಜೌಡಕಿ ಕುಣಿತ, ಡೊಳ್ಳು ಹಾಗೂ ತಳೇವಾಡದ ಹಣಮಂತ ಭಜಂತ್ರಿಯವರ ಕರಡಿ ಮಜಲು ತಂಡದೊಂದಿಗೆ ಹೊರಟು ಪಟ್ಟಣದ ಪ್ರಮುಖ ಬೀದಿಗಳ ಮೂಲಕ ಬಸವೇಶ್ವರ ದೇವಸ್ಥಾನದ ಬಸವ ತೀರ್ಥ ಬಾವಿಯಲ್ಲಿ ಗಂಗಸ್ಥಳ ಪೂಜೆ ಮುಗಿಸಿಕೊಂಡ ನಂತರ ಪ್ರಮುಖ ಬೀದಿಗಳ ಮೂಲಕ ದೇವಸ್ಥಾನಕ್ಕೆ ಆಗಮಿಸಿತು. ಪಲ್ಲಕ್ಕಿ ಉತ್ಸವವು ದೇವಸ್ಥಾನಕ್ಕೆ ಆಗಮಿಸಿದ ನಂತರ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯ ಹಾಗೂ ತೊಟ್ಟಿಲು ಕಾರ್ಯಕ್ರಮ ಜರುಗಿತು.



ಪಲ್ಲಕ್ಕಿ ಉತ್ಸವದಲ್ಲಿ ಶರಣಪ್ಪ ಬೆಲ್ಲದ, ಬಸವರಾಜ ಟಕ್ಕಳಕಿ, ಹಣಮಂತ ಹತ್ತಿ, ಮಹಾಂತೇಶ ಹಂಜಗಿ, ಬಸವರಾಜ ಕಾಮನಕೇರಿ, ರಮೇಶ ಪವಾರ, ಸಂಗಮೇಶ ದೊಡ್ಡಮನಿ, ಕೊಟೆಪ್ಪ ಬಿರಾದಾರ, ಮಹೇಶ ಸಾಲವಾಡಗಿ, ಭೀಮು ಗೊಳಸಂಗಿ, ಶಿವು ಜೇರ, ಭೀಮಶಿ ಮದರಕಿ, ಲಕ್ಷ್ಮೀಬಾಯಿ ಬೆಲ್ಲದ, ಉಮಕ್ಕ ಹತ್ತಿ ಸೇರಿದಂತೆ ಇತರರು ಭಾಗವಹಿಸಿದ್ದರು. ಭಕ್ತರಿಗೆ ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ಜಾತ್ರಾಮಹೋತ್ಸವದಂಗವಾಗಿ ರಾಯಭಾಗ ತಾಲೂಕಿನ ಆಲಖನೂ–ರಿನ ಮಲ್ಲಿಕಾರ್ಜುನ ನಾಟ್ಯ ಸಂಘದಿಂದ ಮಗ ಹೋದರೂ ಮಾಂಗಲ್ಯ ಬೇಕು ಎಂಬ ಸಾಮಾಜಿಕ ನಾಟಕ ಪ್ರದರ್ಶನಗೊಂಡಿತು.

# ದೇಗುಲ ಅಭಿವೃದ್ಧಿಗೆ ಚೆಕ್ ವಿತರಣೆ

**ಉದಯರಶ್ಮಿ ನ್ಯೂಸ್**

ಇಂಡಿ: ಶ್ರೀ ಕ್ಷೇತ್ರ ಧರ್ಮಸ್ಥಳ ಶ್ರೀ ಮಂಜುನಾಥ ಸ್ವಾಮಿಯ ಸನ್ನಿದಾನದಿಂದ ಇಂಡಿ ಪಟ್ಟಣದ ಬೀರಪ್ಪ ನಗರದಲ್ಲಿರುವ ಶಬ–ರಿಗಿರಿವಾಸ ಶ್ರೀ ಅಯ್ಯಪ್ಪ ಸ್ವಾಮಿ ಕಮೀಟಿ (ರಿ) ಇಂಡಿ ಇವರಿಗೆ ಶ್ರೀ ಕ್ಷೇತ್ರ ಧರ್ಮಸ್ಥಳದ ಸಮುದಾಯ ಅಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ 1 ಲಕ್ಷ (ಒಂದು ಲಕ್ಷ ರೂ.) ಚಕ್‌ನ್ನು ಯೋಜನಾಧಿಕಾರಿಯಾದ ನಟರಾಜ ಎಲ್.ಎಂ ವಿತರಿಸಿದರು.



ನಟರಾಜ ಮಾತನಾಡಿ, ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಪ್ರತೀಕ ಮತ್ತು ದೇವಸ್ಥಾನಗಳು ನೆಮ್ಮದಿಯ ಶ್ರದ್ಧಾ ಕೇಂದ್ರಗಳು. ಅದಕ್ಕಾಗಿ ಮಂಜುನಾಥ ಸನ್ನಿಧಾನದಿಂದ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನಕ್ಕೆ ಹಣ ನೀಡಿರುವದು ನಮ್ಮ ಸಂಸ್ಕೃತಿಯ ಪ್ರತೀಕ ಎಂದರು.

ಪುಣ್ಯ ಕಾರ್ಯಗಳಲ್ಲಿ ಧರ್ಮಸ್ಥಳದ ಕಾರ್ಯ ಶ್ಲಾಘನೀಯ. ಈ ಭಾಗದಲ್ಲಿ ಸ್ತ್ರೀ ಶಕ್ತಿ ಗುಂಪುಗಳನ್ನು ಮಾಡಿ ಸ್ತ್ರೀಯರಿಗೆ ಸ್ವಾವಲಂಬಲನೆಗಾಗಿ ಹಣಕಾಸಿನ ಸಹಾಯ ನೀಡುತ್ತಿರುವದು ಹೆಮ್ಮೆಯ ವಿಷಯ. ಅನೇಕ ಮಹಿಳೆಯರು ಈ ಯೋಜನೆ ಲಾಭ ಪಡೆದಿದ್ದು ಸ್ವಾವಲಂಬಿ ಜೀವನ ನಡೆಸುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ದೇವಸ್ಥಾನದ ಅರ್ಚಕ ಪ್ರಕಾಶ ಹೂಗಾರ, ಅಧ್ಯಕ್ಷ ಶಾಂತಕುಮಾರ ಮೇತ್ರಿ, ಕಾರ್ಯದರ್ಶಿ ಶರಣಗೌಡ ಬಿರಾದಾರ., ವಿರೇಶ ಹತ್ತೂರಮಠ, ರವಿ ಗವಳಿ, ಮಲ್ಲಿಕಾರ್ಜುನ ಬಿರಾದಾರ, ಚಂದ್ರಶೇಖರ ಮದರಿ, ಚಿದಾನಂದ ಕುಂಬಾರ, ಮಲ್ಲು ಮಾಳಿ, ಸಿದ್ದು ಅರಕೇರಿ, ರಾಜು ತಲ್ಯಾಳ, ಪುನೀತ ಬಿರಾದಾರ, ರಾಜು ಸಾತಪೂರ, ಲಿಂಬಾಜಿ ರಾಠೋಡ, ಸಿದ್ದು ಶಿವಣಗಿ, ಅಮೋಘಸಿದ್ದ ಬಗಲಿ, ಕೃಷ್ಣಾ ಬಿರಾದಾರ, ಪರುಶುರಾಮ ನಿಂಬರಗಿ, ಶಂಕರ ಪಾಟೀಲ, ಸುಭಾಷ ರಾಠೋಡ, ಸಂತೋಷ ರಾಠೋಡ ಮತ್ತಿತ–ರಿದ್ದರು.

# ಬಸವನಬಾಗೇವಾಡಿ: ಬುದ್ಧ ಜಯಂತಿ ಆಚರಣೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಅಶೋಕ ಚಲವಾದಿ ಅವರ ನಿವಾಸದಲ್ಲಿ ಬುದ್ಧ ಪೂರ್ಣಿಮಯಂಗವಾಗಿ ಗುರುವಾರ ಗೌತಮ ಬುದ್ಧರ 2561 ನೇ ಜಯಂತಿಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಜಯಂತಿಯಂಗವಾಗಿ ಗೌತಮ ಬುದ್ಧ, ಡಾ.ಅಂಬೇಡ್ಕರ ಅವರ



ಪ್ರತಿಮೆಗಳಿಗೆ ಪೂಜೆ ಸಲ್ಲಿಸಲಾಯಿತು. ಅಶೋಕ ಚಲವಾದಿ ಮಾತನಾಡಿ, ಬುದ್ಧ ಪೌರ್ಣಿಮಿಯು ಅತ್ಯಂತ ವಿಶೇಷ ಮತ್ತು ಪವಿತ್ರ ದಿನವಾಗಿದೆ. ಬುದ್ಧ ಪೌರ್ಣಮಿಯ ಭಗವಾನ್ ಬುದ್ಧನ ಜನ್ಮ, ಬೋಧನ ಮತ್ತು ಮಹಾಪರಿನಿರ್ವಾಣವನ್ನು ನೆನಪಿಸುವ ಪ್ರಮುಖ ಬೌದ್ಧ ಹಬ್ಬವಾಗಿದೆ. ಇದು ಶಾಂತಿ, ಕರುಣೆ ಮತ್ತು ಪ್ರಜಯ ಆದ–ಾತ್ಮಿಕ ಮೌಲ್ಯಗಳನ್ನು ಪ್ರತಿನಿಧಿಸುತ್ತದೆ ಎಂದರು. ಈ ಸಂದರ್ಭದಲ್ಲಿ ವಿಠ್ಠಲ ಚಲವಾದಿ, ಪ್ರಜ್ವಲ ನಂದಿ, ಗಂಗಾ ನಂದಿ, ಪ್ರಿಯಾಂಕಾ ನಂದಿ, ಪೂಜಾ ನಂದಿ, ಅನಿತಾ ನಂದಿ ಇದ್ದರು.

# ಪಿಯುಸಿ: ಸರ್ವೋದಯ ಶಿಕ್ಷಣ ಸಂಸ್ಥೆ ವಿದ್ಯಾರ್ಥಿಗಳ ಉತ್ತಮ ಸಾಧನೆ

**ಉದಯರಶ್ಮಿ ನ್ಯೂಸ್**



ಚಡಚಣ: ಸಮೀಪದ ಕರ್ನಾಟಕ–ಮಹಾರಾಷ್ಟ ಗಡಿಗ್ರಾಮ ಉಮದಿಯಲ್ಲಿರುವ ಸರ್ವೋದಯ ಶಿಕ್ಷಣ ಸಂಸ್ಥೆಯ ಸಮತಾ ಮಾಧ್ಯಮಿಕ ಆಶ್ರಮ ಶಾಲೆ ಮತ್ತು ಜೂನಿಯರ್ ಕಾಲೇಜಿನ 12 ನೇ ತರಗತಿ ವಾರ್ಷಿಕ ಪರೀಕ್ಷೆಯ

ವಿಜ್ಞಾನ ವಿಭಾಗದ ಫಲಿತಾಂಶದಲ್ಲಿ100% ರಷ್ಟು ಹಾಗೂ ಕಲಾ ವಿಭಾಗದಲ್ಲಿ 93% ರಷ್ಟು ಫಲಿತಾಂಶ ಪಡೆಯುವ ಮೂಲಕ ಉತ್ತಮ ಸಾಧನೆ ಮಾಡಿದ್ದಾರೆ.

ಕಾಲೇಜಿನ ವಿಜ್ಞಾನ ವಿಭಾಗದಲ್ಲಿ ಐಶ್ವರ್ಯ ಗಡದೆ– 87.17%(ಪ್ರಥ–ಮ ಸ್ಥಾನ), ಪೃಥ್ವಿ ಹೋರ್ತಿಕರ–83.50%(ದ್ವಿತೀಯ ಸ್ಥಾನ), ಪ್ರಶಾಂತ್ ಪಡುವಳೆ–83.17%(ತೃತೀಯ ಸ್ಥಾನ) ಮತ್ತು ಕಲಾ ವಿಭಾಗದಲ್ಲಿ ಸೋನಾಲಿ ಬೆಳ್ಳುಂಡಗಿ–87.67%(ಪ್ರಥಮ ಸ್ಥಾನ), ಅಶ್ವಿನಿ ಕಕಮರಿ–87.50%(ದ್ವಿತೀಯ ಸ್ಥಾನ), ಶಶಿಕಾಂತ್ ಹೊನಮುರ್ಗಿ–86.33%(ತೃತೀಯ ಸ್ಥಾನ) ಈ ರೀತಿ ಉನ್ನತ ಶ್ರೇಣಿಯಲ್ಲಿ ಅಂಕ ಗಳಿಸುವ ಮೂಲಕ ಕಾಲೇಜಿನ ಕೀರ್ತಿ ಇಮ್ಮಡಿಗೊಳಿಸಿದ್ದಾರೆ. ಇವರ ಸಾಧನೆ ಹೀಗೆ ಹೆಚ್ಚಿಸಲೆಂದು ಸಂಸ್ಥೆಯ ಅಧ್ಯಕ್ಷ ಮಹಾದೇವಪ್ಪಣ್ಣ ಹೋತಿಕರ, ಉಪ ಅಧ್ಯಕ್ಷ ರೇವಪ್ಪಣ್ಣ ಲೋಣಿ, ಕಾರ್ಯದರ್ಶಿ ಎಸ್.ಕೆ ಹೊರ್ತಿಕರ ಹಾಗೂ ಆಡಳಿತ ಮಂಡಳಿ ಸೇರಿ ಬೋಧಕ–ಬೋಧಕೇತರ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.

## ಮಹಿಳೆ ಕಾಣೆ :ದೂರು ದಾಖಲು

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ತಾಲೂಕಿನ ನೆರಬೆಂಚಿ ಗ್ರಾಮದ ಅಕ್ಷತಾ ಪ್ರವೀಣ ಮಡಿವಾಳರ ಕಾಣೆಯಾದ ಬಗ್ಗೆ ಇಲ್ಲಿನ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮನೆಗೆಲಸ ಮಾಡಿಕೊಂಡಿದ್ದ ಅಕ್ಷತಾ ಮಲ ವಿಸರ್ಜನೆಗೆಂದು ಮೇ13 ರಂದು ಹೋದವಳು ಇಲ್ಲಿಯವರೆಗೆ ಮನೆಗೆ ವಾಪಸ್ ಬಂದಿರುವದಿಲ್ಲ ಎಂದು ಅವಳ ಪತಿ ಪ್ರವೀಣ ನೀಡಿದ ದೂರಿನ ಮೇಲೆ ಪ್ರಕರಣ ದಾಖಲಿಸಿದ್ದಾರೆ.

# ಬಾಳೆಹಣ್ಣು ಮತ್ತು ಸಾರ್ವಜನಿಕ ಜೀವನ

**ಉದಯರಶ್ಮಿ ದಿನಪತ್ರಿಕೆ**



– ಸಂತೋಷ್ ರಾವ್ ಪೆರ್ಮುಡ,
ಪೆರ್ಮುಡ ಮನೆ, ಪಟ್ರಮೆ ಗ್ರಾಮ
ಮತ್ತು ಅಂಚೆ ಬೆಳ್ತಂಗಡಿ ತಾಲೂಕು,

ಒಂದು ಊರಿನಲ್ಲಿ ಒಬ್ಬ ಧನಿಕನಿದ್ದ. ಒಮ್ಮೆ ಆತ ತನ್ನ ಕುಟುಂಬದೊಂದಿಗೆ ಮಾರುಕಟ್ಟೆಗೆ ತೆರಳುತ್ತಾನೆ. ಮಾರುಕಟ್ಟೆಯಲ್ಲಿ ವಸ್ತುಗಳನ್ನು ಖರೀದಿಸುತ್ತಾ ಕೊನೆಗೆ ಬಾಳೆಹಣ್ಣಿನ ಅಂಗಡಿಯ ಮುಂದೆ ಬಂದು ನಿಲ್ಲುತ್ತಾನೆ. ಅಂಗಡಿಯ ಮುಂದೆ ನೇತುಹಾಕಿದ್ದ ಬಾಳೆಹಣ್ಣನ್ನು ನೋಡಿ ಇದರ ದರವೆಷ್ಟು ಎಂದು ವ್ಯಾಪಾರಿಯಲ್ಲಿ ಕೇಳುತ್ತಾನೆ. ಆಗ ವ್ಯಾಪಾರಿಯು ಕಿಲೋಗೆ ಅರುವತ್ತು ರೂಪಾಯಿ ಎನ್ನುತ್ತಾನೆ. ಬಾಳೆಹಣ್ಣನ್ನು ತೆಗೆದುಕೊಳ್ಳಲೇ ಎಂದು ಧನಿಕನು ತನ್ನ ಹೆಂಡತಿಯಲ್ಲಿ ಕೇಳಿದಾಗ, ಹೆಂಡತಿಯು ದರವು ಅತ್ಯಂತ ದುಬಾರಿಯಾಯಿತು ಬೇರೆಡೆ ನೋಡೋಣ ಎನ್ನುತ್ತಾಳೆ. ಇವರು ಇನ್ನೊಂದು ಅಂಗಡಿಗೆ ತೆರಳಿ ಅಲ್ಲಿ ಬಾಳೆಹಣ್ಣಿನ ದರವನ್ನು ವಿಚಾರಿಸಿದಾಗ ಕಿಲೋಗೆ ನಲುವತ್ತೊಂದು ರೂಪಾಯಿ ಎಂದು ಅಂಗಡಿಯಾತ ಹೇಳುತ್ತಾನೆ. ಧನಿಕನ ಆಶ್ಚರ್ಯಗೊಂಡು ಒಂದೇ ಗುಣಮಟ್ಟದ ಬಾಳೆಹಣ್ಣು ಹತ್ತಿರ ಹತ್ತಿರದ ಎರಡು ಅಂಗಡಿಗಳಲ್ಲಿದ್ದರೂ ದರದಲ್ಲೇಕೆ ಎಷ್ಟೊಂದು ವ್ಯತ್ಯಾಸವೆಂದು ಚಿಂತಿಸುತ್ತಾನೆ. ಧನಿಕ ಮರಳಿ ಮೊದಲನೇ ಬಾಳೆಹಣ್ಣಿನ ಅಂಗಡಿಗೆ ಬಂದು ಅಲ್ಲಿನ ವ್ಯಾಪಾರಿಯಲ್ಲಿ ನಿನ್ನ ದರವು ಹೆಚ್ಚಾಗಿದ್ದು ಪಕ್ಕದ ಅಂಗಡಿಯಾತ ಕಡಿಮೆ ದರಕ್ಕೆ ಬಾಳೆಹಣ್ಣನ್ನು ನೀಡುತ್ತಿದ್ದಾನೆ ನಿನ್ನ ಬಾಳೆಹಣ್ಣನ್ನು ಯಾರು ಖರೀದಿಸುತ್ತಾರೆ ಎಂದು ಪ್ರಶ್ನೆಯನ್ನು ಅಂಗಡಿಯಾತನಿಗೆ ಹಾಕುತ್ತಾನೆ.

ಆಗ ಮೊದಲನೆ ಅಂಗಡಿಯಾತ ನಗುತ್ತಾ, ನಾನು ಇಡೀ ಬಾಳೆಹಣ್ಣಿನ ಗೊನೆಯನ್ನೇ ಇಟ್ಟುಕೊಂಡು ಬಾಳೆಹಣ್ಣನ್ನು ವ್ಯಾಪಾರ ಮಾಡುತ್ತೇನೆ. ಗ್ರಾಹಕರು ಬಾಳೆಹಣ್ಣನ್ನು ಕೇಳಿದಾಗ ಗೊನೆಯಿಂದ ಬಾಳೆಹಣ್ಣನ್ನು ಕಿತ್ತು ನೀಡುತ್ತೇನೆ. ಆದರೆ ಪಕ್ಕದ ಅಂಗಡಿಯಾತನ ಬಾಳೆಹಣ್ಣು ಗೊನೆಯಿಂದ ಸಂಪೂರ್ಣವಾಗಿ ಉದುರಿದ್ದು, ಅದನ್ನು ಆತ ಕಡಿಮೆ ದರಕ್ಕೆ ಮಾರಾಟ ಮಾಡುತ್ತಿದ್ದಾನೆ ಎಂದು ಉತ್ತರಿಸುತ್ತಾನೆ. ಬಾಳೆಹಣ್ಣಿನ ವ್ಯಾಪಾರಿಯ ಉತ್ತರವು ನಮ್ಮೆಲ್ಲ–ರಿಗೂ ಹೊಸತಾದ ಒಂದು ಸಂದೇಶವನ್ನು ನೀಡುತ್ತದೆ. ಅದೇನೆಂದರೆ ಸಮಾಜದಲ್ಲಿ ಹತ್ತು ಮಂದಿಯ ಜೊತೆಗೆ ಕೂಡಿ ಬದುಕಿದಾಗ ಮಾತ್ರ ಒಬ್ಬ ವ್ಯಕ್ತಿಗೆ ಮೌಲ್ಯ ಜಾಸ್ತಿ. ಅದು ಬಿಟ್ಟು ಕೇವಲ ನಾನು, ನನ್ನ ಹೆಂಡತಿ, ನನ್ನ ಕುಟುಂಬ ಎಂದಷ್ಟೇ ಸಮಾಜದಿಂದ ವಿಮುಖರಾಗಿ ಬದುಕಿದರೆ ಉದುರಿ ಹೋದ ಬಾಳೆಹಣ್ಣಿನಂತೆ ನಮ್ಮ ಬೆಲೆ ಕೇವಲ ನಲುವತ್ತೊಂದು ರೂಪಾಯಿ ಆಗಿರುತ್ತದೆ. ಸಮಾಜದಲ್ಲಿ ಯಾರು ಹತ್ತು ಜನರ ಮಧ್ಯೆ, ವಿವಿಧ ರೀತಿಯ ಸಂಘಟನೆಗಳ ಜೊತೆಯಲ್ಲಿ ಸೇರಿ ಹೊಂದಿಕೊಂಡು ಬದುಕುತ್ತಾರೋ ಅವರಿಗೆ ತೂಕ, ಬೆಲೆ, ಹಾಗೂ ಬದುಕಿನ ಸಾರ್ಥಕ್ಯ ಜಾಸ್ತಿ ಎಂದು.

ನಾನು, ನನ್ನ ದುಡಿಮೆ, ನನ್ನ ದುಡ್ಡು, ನನ್ನ ಅಂತಸ್ತು ಎನ್ನುವುದಿದ್ದಲ್ಲಿ ಅದು ಕೇವಲ ಆತನಿಗಷ್ಟೇ ಸೀಮಿತ, ಆತನ ಮನೆಯೊಳಗೆ ಹಾಗೂ ಆತನ ಕಂಪೌಂಡ್ ವ್ಯಾಪ್ತಿಗಷ್ಟೇ ಸೀಮಿತವಾಗಿರುತ್ತದೆ. ಅದಕ್ಕಾಗಿ ವ್ಯಕ್ತಿಯೊಬ್ಬನು ಹೆಚ್ಚು ಪ್ರಚಲಿತಕ್ಕೆ ಬರಬೇಕೆಂದಾದರೆ ಊರಿನ ದೇವಸ್ಥಾನದ ಕಾರ್ಯಕ್ರಮಗಳಲ್ಲಿ, ಊರಿನ ಧಾರ್ಮಿಕ ಕಾರ್ಯಕ್ರಮಗಳಲ್ಲಿ, ಶೈಕ್ಷಣಿಕ ಕಾರ್ಯಕ್ರಮಗಳಲ್ಲಿ ಅಥವಾ ವ್ಯಾವಹಾರಿಕ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಾಗ ವ್ಯಕ್ತಿಯು ಎಲ್ಲರ ಸಂಪರ್ಕಕ್ಕೆ ಬಂದು ಆತ ಏನೆಂದು ಎಲ್ಲ–ರಿಗೂ ತಿಳಿದು ಆತನ ಮೌಲ್ಯವೂ ಹೆಚ್ಚುತ್ತಾ ಹೋಗುತ್ತದೆ. ವ್ಯಕ್ತಿಯು ಪ್ರಪಂಚದ ಅಥವಾ ಸಮಾಜದ ಸಂಪರ್ಕಕ್ಕೆ ಬಂದಾಗ ಆತನ







ಕುರಿತು ಎಲ್ಲರಿಗೂ ತಿಳಿಯುತ್ತಾ ಹೋಗುತ್ತದೆ ವ್ಯಕ್ತಿಯೊಬ್ಬ ಮನೆಯೊಳಗಷ್ಟೇ ಇದ್ದಾಗ ಆತ ತಂದೆ ತಾಯಿಗೆ ಕೇವಲ ಮಗನಾಗಿ ಅಷ್ಟೇ ಇರುತ್ತಾನೆ. ಊರಿನ ಬಸ್ ನಿಲ್ದಾಣದಲ್ಲಿ ನಿಂತಾಗ ಬಸ್‌ಗೆ ಕಾಯುತ್ತಿರುವ ಹತ್ತು ಮಂದಿಯಲ್ಲಿ ಈತನೂ ಒಬ್ಬರಾಗಿರುತ್ತಾನೆ. ಅದೇ ಪಟ್ಟಣದ ಬಸ್ ನಿಲ್ದಾಣದ ನೂರು ಮಂದಿಯಲ್ಲಿ ಈತನೂ ಒಬ್ಬ, ಜಿಲ್ಲೆಯ ಬಸ್ ನಿಲ್ದಾಣದ ಸಾವಿರ ಮಂದಿಯಲ್ಲಿ ಈತನೂ ಒಬ್ಬನಾಗಿರುತ್ತಾನೆ. ವ್ಯಕ್ತಿತ್ವದಲ್ಲಿ ಎತ್ತರಕ್ಕೆ ಏರುತ್ತಾ ಹೋದಂತೆ ನಾವೇನೆಂದು ಎಲ್ಲರಿಗೂ ತಿಳಿಯುತ್ತದೆ. ಜನರೊಂದಿಗೆ, ಸಮಾಜದೊಂದಿಗೆ ಬಾಳಿ ಬದುಕಿದಾಗ ನಮ್ಮಲ್ಲಿರುವ ನ್ಯೂನತೆಗಳು, ದೌರ್ಬಲ್ಯಗಳು ಅರಿವಾಗಿ ಅವುಗಳನ್ನು ಸರಿಪಡಿಸಿಕೊಳ್ಳಲು ಸಾಧ್ಯವಾಗುತ್ತದೆ.

ಯಾರು ಕೇವಲ ಮನೆಗಷ್ಟೇ ಸೀಮಿತವಾಗಿರುತ್ತಾರೋ ಅವರು ಅವರವರ ಮಕ್ಕಳಿಗೆ ಮತ್ತು ಹೆಂಡತಿಗೆ ಅಷ್ಟೇ ಮೌಲ್ಯಯುತ ವ್ಯಕ್ತಿಯಾಗಿ ಕಾಣಿಸಿಕೊಳ್ಳುತ್ತಾರೆ. ಸಮಾಜದ ಮಧ್ಯೆ ಬೆರೆತಾಗ ಯಾವಾಗ ಮೌಲ್ಯವನ್ನು ಗಳಿಸಿಕೊಳ್ಳುತ್ತೇವೋ ಅದುವೇ ಜೀವನದ ನಿಜವಾದ ಸಾಥ–ರ್ಕ್ಯವಾಗುತ್ತದೆ. ಸಮಾಜದಲ್ಲಿ ಪಾರದರ್ಶಕವಾಗಿ ಬದುಕುವವರಿಗೆ, ಪ್ರಾಮಾಣಿಕತೆಯಿಂದ ಜೀವಿಸುವವ–ರಿಗೆ, ಪರಿಶುದ್ಧವಾದ ಮನಸ್ಸು ಉಳ್ಳವರಿಗೆ, ನಿಸ್ವಾರ್ಥವಾಗಿ ತ್ಯಾಗ ಮತ್ತು ಸಹನೆಯಿಂದ ಬದುಕಲು ಕಲಿತವರಿಗೆ, ಬೇರೆಯವರಿಗೂ ಮಾನ್ಯತೆಯನ್ನು ನೀಡುತ್ತಾ ಬದುಕುವವರಿಗೆ ಸಮಾಜವು ಮಾನ್ಯತೆಯನ್ನು ನೀಡುತ್ತದೆ. ಇದಕ್ಕಾಗಿ ನಾವುಗಳು ಕೇವಲ ಮನೆಗಷ್ಟೇ ಸೀಮಿತವಾಗಿರದೆ ಸಮಾಜದಲ್ಲಿ ಬೆರೆತಾಗ ಮಾತ್ರ ವ್ಯಕ್ತಿಯ ಮೌಲ್ಯ ಮತ್ತು ಮಾನ್ಯತೆಯ ಹೆಚ್ಚಾಗುತ್ತಾ ಹೋಗುತ್ತದೆ.

ಲೋಟದಲ್ಲಿರುವ ನೀರಿಗೆ ಒಂದು ಹಿಡಿ ಸಕ್ಕರೆಯನ್ನು ಹಾಕಿದಾಗ ಹೇಗೆ ಅದು ತನ್ನ ಭೌತಿಕ ಅಸ್ಥಿತ್ವದ ಛಾಯೆಯೂ ಕಾಣಿಸದಂತೆ ತಿಳಿ ನೀರಿನಲ್ಲಿ ಕರಗಿ ನೀರನ್ನೆಲ್ಲ ಸಿಹಿಯಾಗಿ ಮಾಡುತ್ತದೆಯೋ ಅದೇ ರೀತಿಯಲ್ಲಿ ನಾವುಗಳೂ ಗುಣದಲ್ಲಿ ಸಕ್ಕರೆಯಂತಾಗಿ ಸಮಾಜವೆಂಬ ನೀರಿನಲ್ಲಿ ಕರಗಿ ಸಿಹಿಯಾದ ವಾತಾವರಣವನ್ನು ನಿರ್ಮಾಣ ಮಾಡಬೇಕು. ಬಾಳೆಗೊನೆಯಲ್ಲಿ ಜೊತೆಯಾಗಿ ಇದ್ದ ಬಾಳೆಹಣ್ಣಿಗೆ ಹೇಗೆ ಹೆಚ್ಚಿನ ಮೌಲ್ಯವಿದೆಯೋ, ಬಿಡಿ ಬಿಡಿಯಾಗಿರುವ ಬಾಳೆಹಣ್ಣಿಗೆ ಹೇಗೆ ಮೌಲ್ಯ ಕಡಿಮೆಯೋ ಅದೇ ರೀತಿ ನಮ್ಮ ಜೀವನವೂ ಆಗುತ್ತದೆ. ಅದ್ದರಿಂದ ಬದುಕಲ್ಲಿ ಎಷ್ಟೇ ಹಣ, ಜ್ಞಾನ, ಕೌಶಲ ಇದ್ದರೂ ಸಮಾಜದೊಂದಿಗೆ, ಜನರೊಂದಿಗೆ ಬೆರೆತು ಬದುಕದಿದ್ದಲ್ಲಿ ಅದೆಲ್ಲವೂ ಕೇವಲ ಆತನಿಗಷ್ಟೇ ಸೀಮೀತ ಆಗಿ ಉಳಿದುಬಿಡುತ್ತದೆ. ಬದುಕಲ್ಲಿ ಎಷ್ಟು ಹಣ, ಆಸ್ತಿ ಮತ್ತು ಅಂತಸ್ತು ಗಳಿಸಿದ್ದೇವೆ ಎನ್ನುವುದಕ್ಕಿಂತ, ನಮ್ಮ ಕೊನೆಯ ದಿನದಲ್ಲಿ ನಮ್ಮೊಂದಿಗೆ ಎಷ್ಟು ಜನರು ನಮ್ಮೊಂದಿಗಿರುತ್ತಾರೆ ಎನ್ನುವುದಷ್ಟೇ ಗಣನೆಗೆ ಬರುತ್ತದೆ. ಹಾಗಾಗಿ ಸಮಾಜದಲ್ಲಿ ಕೂಡಿ ಬಾಳೋಣ.

# ಸಿಎಂ ಗೆ ಡಿಸಿಯಿಂದ ವಿಡಿಯೋ ಸಂವಾದದ ಮೂಲಕ ಮಾಹಿತಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಸಮರ್ಪಕವಾಗಿ ಬರ ಪರಿಸ್ಥಿತಿ ನಿರ್ವಹಣೆ ಹಾಗೂ ಕುಡಿಯುವ ನೀರಿನ ಸ್ಥಿತಿಗತಿ ಕುರಿತು ಮುಖ್ಯಮಂತ್ರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಇಂದು ವಿಡಿಯೋ ಸಂವಾದದ ಮೂಲಕ ಮಾಹಿತಿ ಒದಗಿಸಿದರು.



ಜಿಲ್ಲೆಯಲ್ಲಿ ಪೂರ್ವ ಮುಂಗಾರು ಮಳೆ ಮಾರ್ಚ್–2024ರಿಂದ ಮೇ. ತಿಂಗಳ22ರವರೆಗೆ ವಾಡಿಕೆ ಮಳೆ 41.00 ಮಿ.ಮೀ. ಇದ್ದು, 69.00 ಮೀ.ಮೀ. ಮಳೆಯಾಗುವ ಮೂಲಕ ಶೇ.66 ರಷ್ಟು ಹೆಚ್ಚಿನ ಮಳೆಯಾಗಿದೆ. ಪ್ರಕೃತಿ ವಿಕೋಪದಡಿ ಹಾನಿಗೊಳಗಾದ ತೊಗರಿ, ಮೆಕ್ಕೆಜೋಳ, ಸಜ್ಜೆ, ಸೂರ್ಯಕಾಂತಿ, ಶೇಂಗಾ, ಹತ್ತಿ ಮತ್ತು ಕಬ್ಬು, ಉಳ್ಳಾಗಡ್ಡಿ, ಮೆಣಸಿನಕಾಯಿ, ಟೊಮೆಟೊ ಬದನೆ, ಬೀನ್ಸ್, ನಿಂಬೆ ಸೇರಿದಂತೆ ಕೃಷಿ ಹಾಗೂ ತೋಟಗಾರಿಕೆ ಬೆಳೆಯ ಒಟ್ಟು 267720 ಫಲಾನುಭವಿಗಳ ಪೈಕಿ 2,50,063 ರೈತರಿಗೆ 41348.76 ಲಕ್ಷ ರೂ. ಪರಿಹಾರ ಧನ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗಿದೆ. ಒದಗಿಸಲಾಗಿದೆ. 3278 ವಿವಿಧ ಪ್ರಕರಣಗಳು ಬಾಕಿ ಉಳಿದಿದ್ದು, ಮೇ.22 ರಂದು 1329 ಫಲಾನುಭವಿಗಳ ಪಟ್ಟಿಯನ್ನು ಅನುಮೋದಿಸಿ ಸಲ್ಲಿಸಲಾಗಿದೆ. ಜಿಲ್ಲೆಗೆ ರಾಜ್ಯದಲ್ಲಿಯೇ ಅತಿ ಹೆಚ್ಚು ಪರಿಹಾರ ಧನ ಬೆಳೆ ಹಾನಿ ಜಮೆಯಾಗಿರುವುದಕ್ಕೆ ಕಂದಾಯ ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು.

ಜಿಲ್ಲೆಯ ವಿವಿಧ ತಾಲೂಕಿನ 119 ಗ್ರಾಮ, 654 ಜನವಸತಿಗಳಿಗೆ 294 ಟ್ಯಾಂಕರ್‌ಗಳ ಮೂಲಕ 588 ಟ್ರಿಪ್ ಕುಡಿಯುವ ನೀರು ಸರಬರಾಜ ಮಾಡಲಾಗಿದೆ. ಆಲಮಟ್ಟಿ ಜಲಾಶಯದಲ್ಲಿ ಜನ ಜಾನುವಾರುಗಳ ಕುಡಿಯುವ ನೀರಿನ ಸಲುವಾಗಿ ಚಿಮ್ಮಲಗಿ ಏತ ನೀರಾವರಿ ಯೋಜನೆಯಡಿ 27 ಕೆರೆಗಳಿಗೆ ಹಾಗೂ ಮುಳವಾಡ ಹಂತ–3ರಡಿ 72 ಕೆರೆಗಳನ್ನು ತುಂಬಿಸಲು 6 ಟಿಎಂಸಿ ನೀರು ಕಾಯ್ದಿರಿಸಲಾಗಿದ್ದು, ನೀರನ್ನು ಹಂತ ಹಂತವಾಗಿ ಪ್ರಾದೇಶಿಕ ಆಯುಕ್ತರಿಂದ ಅನುಮತಿ ಪಡೆದು ಕಾಲುವೆಗಳಿಗೆ ಹರಿಸಲಾಗಿದೆ. ನಾರಾಯಣಪುರ ಜಲಾಶಯದಿಂದ ಐಬಿಸಿ ಮತ್ತು ಐಎಲ್‌ಸಿ ಕಾಲುವೆಗಳಿಗೆ 3.47 ಟಿಎಂಸಿ ನೀರು ಹರಿಸಲಾಗಿದೆ. ನಗರದ ಭೂತನಾಳ ಕೆರೆಗೆ ಮುಳವಾಡ ಏತ ನೀರಾವರಿ ಕಾಲುವೆಯಿಂದ ನೀರು ಹ–ರಿಸಲಾಗಿದ್ದು, ಕುಡಿಯುವ ನೀರಿನ ಯಾವುದೇ ತೊಂದರೆಯಿಲ್ಲ. ಜಿಲ್ಲೆಯಲ್ಲಿ ಜೂನ್–30ರವರೆಗೆ ಸಾಕಾಗುವಷ್ಟು ನೀರು ಸಂಗ್ರಹವಿದ್ದು, ಕುಡಿಯುವ ನೀರಿನ ಯಾವುದೇ ಸಮಸ್ಯೆ ಜಿಲ್ಲೆಯಲ್ಲಿ ಇಲ್ಲ ಎಂದು ಅವರು ಮಾಹಿತಿ ನೀಡಿದರು.

ಅದರಂತೆ ಜಿಲ್ಲೆಯಲ್ಲಿ 3,13,652 ಮೆಟ್ರಿಕ್ ಟನ್ ಮೇವು ಲಭ್ಯವಿದ್ದು, ಇದನ್ನು 16 ವಾರಗಳವರೆಗೆ ಉಪಯೋಗಿಸಹುದಾಗಿದೆ. 35,808 ಮೇವಿನ ಬಿಜಗಳ ಮಿನಿಕಿಟ್ ಸರಬರಾಜಾಗಿದ್ದು, ಎಲ್ಲ ಕಿಟ್‌ಗಳನ್ನು ರೈತರಿಗೆ ವಿತರಿಸಲಾಗಿದೆ. ಬರ ಹಿನ್ನಲೆಯಲ್ಲಿ ಅಂತರರಾಜ್ಯ ಮೇವು ಸಾಗಾಣಿಕೆ ನಿಷೇಧಿಸಿದೆ. ಜಿಲ್ಲೆಯಲ್ಲಿ 12 ಚೆಕ್ ಪೋಸ್ಟಳನ್ನು ಸ್ಥಾಪಿಸಲಾಗಿದೆ. ಮೇವು ಲಭ್ಯತೆ ಇರುವ ಕಡೆಗಳಲ್ಲಿ ಒಟ್ಟು 02 ಮೇವು ಬ್ಯಾಂಕ್ ಸ್ಥಾಪಿಸಲಾಗಿದೆ. ಬರ ಪರಿಸ್ಥಿತಿ ನಿರ್ವಹಣೆಗೆ ಒಟ್ಟು 1800.00 ಲಕ್ಷ ಅನುದಾನ ಬಿಡುಗಡೆಯಾಗಿದ್ದು, 331.29 ಲಕ್ಷ ರೂ.ಗಳಲ್ಲಿ ಒಟ್ಟು 238 ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ. ಟ್ಯಾಂಕರ್ ಮತ್ತು ಮೇವಿಗಾಗಿ ಇದುವರೆಗೆ ತಹಶೀಲ್ದಾರರಿಗೆ 350 ಲಕ್ಷ ರೂ. ಬಿಡುಗಡೆಗೊಳಿಸಲಾಗಿದೆ. ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ 4268.63 ಲಕ್ಷ ಅನುದಾನ ಲಭ್ಯವಿದೆ. ಜಿಲ್ಲೆಯ ಎಲ್ಲ ತಹಶೀಲ್ದಾರ ಖಾತೆಗಳಲ್ಲಿ 510.18 ಲಕ್ಷ ರೂ. ಅನುದಾನವಿದೆ ಎಂದು ಅವರು ತಿಳಿಸಿದರು.

ಬೀಜ–ರಸಗೊಬ್ಬರ ದಾಸ್ತಾನು : ಮುಂಗಾರು ಹಂಗಾಮಿನ ಬಿತ್ತನೆ ಬೀಜಗಳಾದ ಹೆಸರು, ತೊಗರಿ, ಮೆಕ್ಕೆಜೋಳ, ಸಜ್ಜೆ, ಸೂರ್ಯಕಾಂತಿ, ಬಿತ್ತನೆಬೀಜ ಲಭ್ಯವಾಗಲಿದ್ದು, ಸಧ್ಯ ಒಟ್ಟು 5741.50 ಕ್ವಿಂಟಾಲ್ ಮತ್ತು 91969 ಮೆ.ಟನ್ ರಸಗೊಬ್ಬರ ದಾಸ್ತಾನಿದೆ. ಸದ್ಯಕ್ಕೆ ಯಾವುದೇ ಕೊರತೆ ಇಲ್ಲ.

ಪ್ರಕೃತಿ ವಿಕೋಪದಿಂದ ಜಿಲ್ಲೆಯಲ್ಲಿ 4 ಜೀವಗಹಾನಿಯಾಗಿದ್ದು, ಎಲ್ಲ ಪ್ರಕರಣಗಳಿಗೆ ಪರಿಹಾರ ಧನ ಒದಗಿಸಲಾಗಿದೆ. 47 ಜಾನುವಾರುಗಳ ಜೀವಹಾನಿಯಾಗಿದ್ದು, 40 ಪ್ರಕರಣಗಳಲ್ಲಿ ಎಸ್‌ಡಿಆರ್‌ಎಫ್ ಮಾರ್ಗಸೂಚಿಯನ್ವಯ 8.54 ಲಕ್ಷ ರೂ. ಪರಿಹಾರ ಧನ ವಿತರಿಸಲಾಗಿದೆ. ಜಿಲ್ಲೆಯಲ್ಲಿ 141 ಮನೆಗಳೂ ಭಾಗಶ: ಹಾನಿಗೊಳಗಾಗಿದ್ದು, ಅರ್ಹ 6 ಮನೆಗಳಿಗೆ 0.24 ಲಕ್ಷ ರೂ. ಪರಿಹಾರ ಒದಗಿಸಲಾಗಿದೆ. ಅಕಾಲಿಕ ಮಳೆಯಿಂದ 68.50 ಹೇ. ಪ್ರದೇಶ ತೋಟಗಾರಿಕೆ ಬೆಳೆ ಹಾನಿಗೊಳಗಾಗಿದ್ದು, ಅರ್ಹ 201 ರೈತರಿಗೆ ಮಾರ್ಗಸೂಚಿಯನುಸಾರ 14.36 ಲಕ್ಷ ರೂ. ಪರಿಹಾರ ಧನ ವಿತರಿಸಲಾಗಿದೆ. ಪೂರ್ವ ಮುಂಗಾರು ಮುನ್ಸೂಚನೆ ಕುರಿತು ಈಗಾಗಲೇ ಜಿಲ್ಲಾ ವಿಪತ್ತು ಪ್ರಾಧಿಕಾರ ರಚಿಸಿ ಅಗತ್ಯ ಸೂಚನೆಗಳನ್ನು ನೀಡಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ವಿಡಿಯೋ ಸಂವಾದ ಸಭೆಯಲ್ಲಿ ಜಿಲ್ಲೆಯ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಮುದ್ದೇಬಿಹಾಳ ತಾಲೂಕಿನಲ್ಲಿ ಮಳೆ ; ಜನಜೀವನ ಅಸ್ತವ್ಯಸ್ತ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ಪಟ್ಟಣದ ಸೇರಿದಂತೆ ತಾಲೂಕಿನ ಕೆಲವೆಡೆ ಗುರುವಾರ ಗಾಳಿ, ಗುಡುಗು, ಸಿಡಿಲು ಮತ್ತು ಭಾರಿ ಮಳೆಯಾಗಿದ್ದು ರೈತರ ಮೊಗದಲ್ಲಿ ಮಂದಹಾಸ ಮೂಡಿದರೆ ಅಲ್ಲಲ್ಲಿ ಜನಜೀವನ ಅಸ್ತವ್ಯಸ್ತವಾಗಿದೆ.

ತಾಲೂಕಿನ ಅಡವಿ ಹುಲಗಬಾಳ ಗ್ರಾಮದ ಹಣಮಂತ್ರಾಯ ಕಂಬಾರ ಅವರಿಗೆ ಸೇರಿದ ಎತ್ತು, ಗೋನಾಳ ಎಸ್. ಎಚ್ ಗ್ರಾಮದಲ್ಲಿ ಬಸವರಾಜ ಪಾಟೀಲರಿಗೆ ಸೇರಿದ ಒಂದು ಆಕಳು ಇದೇ ಗ್ರಾಮದ ಬಸವರಾಜ ಉಪಲದಿನ್ನಿಯವರಿಗೆ ಸೇರಿದ ಒಂದು ಎತ್ತು, ಹಡಲಗೇರಿ ಗ್ರಾಮದಲ್ಲಿ ನಾಗಪ್ಪ ಹುರುಳಿಯವರಿಗೆ ಸೇರಿದ್ದ ಎಮ್ಮೆ ಸಿಡಿಲಿಗೆ ಬಲಿಯಾದರೆ, ತಾಲೂಕಿನ ಗೆದ್ದಲಮರಿ ಗ್ರಾಮದ ಮುಖ್ಯ ರಸ್ತೆಯಲ್ಲಿರುವ ಬೃಹದಾಕಾರದ ಬೇವಿನ ಮರವೊಂದು ನೆಲಕ್ಕುರುಳಿ ರಸ್ತೆಯನ್ನು ಆವರಿಸಿಕೊಂಡು ಸುಮಾರು ಹೊತ್ತು ವಾಹನ ಸವಾರರು ಪರದಾಡುವಂತಾಯಿತು.



ಪಟ್ಟಣದ ತಾಲೂಕು ಪಂಚಾಯತ ಕಾರ್ಯಾಲಯದ ಆವರಣದಲ್ಲಿ ನೀರು ನಿಂತು ಕೆಲಹೊತ್ತು ತೊಂದರೆಯನ್ನುಂಟು ಮಾಡಿತು. ಕೆಲ ಅಂಗಡಿಗಳೊಳಗೆ ಮಳೆ ನೀರು ಹೊಕ್ಕಿದ್ದವು. ಆ ನೀರನ್ನು ಹೊರಚೆಲ್ಲಲು ಅಂಗಡಿಕಾರರು ಹೆಣಗಾಡಿದ ಸಂದರ್ಭಗಳು ಕಂಡುಬಂದವು. ಪಟ್ಟಣದ ಬಸ್ ನಿಲ್ದಾಣದ ಮುಂಭಾಗದಲ್ಲಿರುವ ಬೃಹತ್ ಮರವೊಂದು ನಿಲ್ದಾಣದ ಫುಟ್ ಪಾತ್ ಮೇಲಿನ ಹೂ ಮತ್ತು ಹಣ್ಣಿನ ಅಂಗಡಿಗಳ ಮೇಲೆ ಬಿದ್ದು ನೆಲಕ್ಕುರುಳಿದ್ದು ಅಂಗಡಿಕಾರರು ಮಳೆ ನೀರಿನಿಂದ ರಕ್ಷಣೆಗಾಗಿ ಬಸ್ ನಿಲ್ದಾಣದ ಒಳಗೆ ನಿಂತಿರುವ ಭಾರಿ ಅನಾಹುತದಿಂದ ಪಾರಾಗಿದ್ದು, ಸುಮಾರು ನಾಲ್ಕೈದು ತಾಸು ರಸ್ತೆಯ ಒಂದು ಬದಿ ಸಂಚಾರ ಸ್ಥಗಿತಗೊಂಡಿತ್ತು.



### ರಾಜ್ಯಪಾಲರ ಭೇಟಿ ಮಾಡಿದ ಕಾರ್ಯನಿರತ ಪತ್ರಕರ್ತರ ಸಂಘದ ನಿಯೋಗ

# ಮಾಧ್ಯಮ ಜವಾಬ್ದಾರಿಯನ್ನು ಶ್ಲಾಘಿಸಿದ ರಾಜ್ಯಪಾಲ ಗೆಹ್ಲೋಟ್

**ಉದಯರಶ್ಮಿ ನ್ಯೂಸ್**



ಬೆಂಗಳೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ(ಕೆಯುಡಬ್ಲ್ಯುಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದ ನಿಯೋಗವು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಸೌಹಾರ್ದಯುತವಾಗಿ ಭೇಟಿಯಾಗಿತ್ತು.

ಕೆಯುಡಬ್ಲ್ಯೂಜೆ ಹೊರನಾಡಿನ ಘಟಕವಾಗಿರುವ ಕಾಸರಗೋಡು ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘವು ಆಯೋಜಿಸಲಿರುವ ಪತ್ರಕರ್ತರ ಸಮಾರಂಭಕ್ಕೆ ಆಗಮಿಸಬೇಕು ಎಂದು ವಿನಂತಿಸಿತು.

ಸರ್ಕಾರ ಮತ್ತು ಜನರ ಮಧ್ಯೆ ಕೊಂಡಿಯಾಗಿ ಕೆಲಸ ಮಾಡುತ್ತಿರುವ ಮಾಧ್ಯಮ ಮತ್ತು ಪತ್ರಕರ್ತರು, ತಮ್ಮದೇ ಆದ ಮಹತ್ವದ ಜವಾಬ್ದಾರಿಯನ್ನು ಹೊಂದಿದ್ದು, ಸಾಮಾಜದ ಸ್ವಾಸ್ಥ್ಯ ಕಾಪಾಡುತ್ತಿದ್ದಾರೆ ಎಂದು ಶ್ಲಾಸಿದರು.

ಕೆಯುಡಬ್ಲ್ಯೂಜೆ ಹುಟ್ಟು ಹಾಕಿದ ಸಾಹಿತಿ ಮತ್ತು ಪತ್ರಕರ್ತ ಡಿ.ವಿ.ಗುಂಡಪ್ಪ ಅವರ ಬಗ್ಗೆ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ನೀಡಿದ ಮಾಹಿತಿ ತಿಳಿದುಕೊಂಡ ರಾಜ್ಯಪಾಲರು, ಅವರ ಆದರ್ಶದಲ್ಲಿ ಈಗಲೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ನಡೆಯುತ್ತಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಮುಂದೆ ಕೆಯುಡಬ್ಲ್ಯೂಜೆ ಕಾರ್ಯಕ್ರಮದಲ್ಲಿ ಭಾಗವಹಿಸುವುದಾಗಿ ತಿಳಿಸಿದರು.

ತಾವು ಕೇಂದ್ರ ಸಚಿವರಾಗಿದ್ದ ಸಂದರ್ಭದಲ್ಲಿ ಕೇರಳ ಮತ್ತು ಕಾಸರಗೋಡು ಭಾಗಕ್ಕೆ ಭೇಟಿ ನೀಡಿದ ನೆನಪುಗಳನ್ನು ಮೆಲುಕು ಹಾಕಿದ ರಾಜ್ಯಪಾಲರು, ಗಡಿನಾಡು ಕಾಸರಗೋಡಿನ ಬಹುಭಾಷಾ ನೆಲದಲ್ಲಿ ಆಯೋಜನೆಗೊಳ್ಳುವ ಕಾರ್ಯಕ್ರಮ ಅಪೂರ್ವವಾಗಿ ಮೂಡಿಬರಲಿ ಎಂದು ಶುಭ ಹಾರೈಸಿದರು.

ಕನ್ನಡಿಗರು ಹೆಚ್ಚಾಗಿರುವ ಮತ್ತು ಕನ್ನಡದ ಪತ್ರಿಕೆಗಳನ್ನು ಓದುವ ಜನರಿರುವ ಪ್ರದೇಶವಾಗಿರುವ ಕಾಸರಗೋಡು ಜನರು ಈಗಲೂ ಭಾವನಾತ್ಮಕವಾಗಿ ಕನ್ನಡಿಗರ ಜೊತೆಗೆ ಅವಿನಾಭಾವ ಸಂಬಂದ ಹೊಂದಿದ್ದಾರೆ. ಆದ್ದರಿಂದ ಕಾಸರಗೋಡಿನಲ್ಲಿ ಕನ್ನಡ ಪತ್ರಕರ್ತರ ಬಳಗವೇ ಈ ಕಾರ್ಯಕ್ರಮ ಆಯೋಜನೆ ಮಾಡುತ್ತಿದೆ ಎಂದು ಕಾಸರಗೋಡು ಜಿಲ್ಲಾ ಸಂಘದ ಅಧ್ಯಕ್ಷ ಎ.ಆರ್.ಸುಬ್ಬಯ್ಯಕಟ್ಟೆ ವಿವರಿಸಿದರು.

ರಾಜ್ಯ ಘಟಕದ ಖಜಾಂಜಿ ವಾಸುದೇವ ಹೊಳ್ಳ, ಬೆಂಗಳೂರು ನಗರ ಜಿಲ್ಲಾ ಘಟಕ ಪ್ರಧಾನ ಕಾರ್ಯದರ್ಶಿ ನರೇಂದ್ರ ಪಾರೆಕಟ್, ಕಾಸರಗೋಡು ಘಟಕದ ಜಿಲ್ಲಾಧ್ಯಕ್ಷ ಎ.ಆರ್.ಸುಬ್ಬಯ್ಯಕಟ್ಟೆ, ಕಾರ್ಯದರ್ಶಿ ಪುರುಷೋತ್ತಮ ಭಟ್ ಕೆ. , ಖ್ಯಾತ ಗಾಯಕ, ಹವ್ಯಾಸಿ ಬರಹಗಾರ ಗೋ.ನಾ.ಸ್ವಾಮಿ ನಿಯೋಗದಲ್ಲಿದ್ದರು.


# ಮನಸ್ಸಿನ ಗಟ್ಟಿತನ –ಸ್ವತಂತ್ರ ಜೀವನ



## ಭಾವರಶ್ಮಿ

– ಡಾ.ಸುಮತಿ ಪಿ
("ನಮ್ಮ ಕಥಾ ಅರಮನೆ" ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**




ಮನುಸ್ಮೃತಿಯ "ನ ಸ್ತ್ರೀ ಸ್ವಾತಂತ್ರ್ಯಂ ಅರ್ಹತಿ" ಎಂಬುದು ಎಷ್ಟು ಆಳವಾಗಿ ಬೇರೂರಿದೆ ಎಂದರೆ,ಅದು ಆಧುನಿಕ 'ಸ್ತ್ರೀ– ಪುರುಷ ಸಮಾನತೆ' ಯ ಕಾಲದಲ್ಲೂ ಸಮಾಜದಿಂದ ಸಂಪೂರ್ಣವಾಗಿ ತೊರೆದು ಹೋಗಿಲ್ಲ. ಇಂದಿನ ಸಮಾಜದಲ್ಲಿ ಸ್ತ್ರೀ– ಪುರುಷರು ಸಮಾನರು ಎನ್ನುವುದು ಕಾನೂನುಬದ್ಧ. ಆದರೆ ಒಂದು ಕಾಲದಲ್ಲಿ ಶಿಕ್ಷಣವನ್ನು ಪಡೆಯುವ ಸ್ವಾತಂತ್ರ್ಯವಿಲ್ಲದ ಸ್ತ್ರೀಗೆ ಇಂದು ಶಿಕ್ಷಣದ ಸ್ವಾತಂತ್ರ್ಯವಿದ್ದರೂ ,ಇನ್ನೂ ಸ್ತ್ರೀ ಸರ್ವ ಸ್ವತಂತ್ರಳು ಎಂದು ಹೇಳುವುದಕ್ಕೆ ಸಾಧ್ಯವಿಲ್ಲ.

ಸ್ತ್ರೀ ಸ್ವಾತಂತ್ರ್ಯವೆಂದರೆ ಎಲ್ಲಿ ಬೇಕಾದರೂ ಹೋಗಬಹುದು,ಏನು ಬೇಕಾದರೂ ಮಾಡಬಹುದು ಎಂಬುವುದರ್ಥವಲ್ಲ.ಸ್ತ್ರೀ ಸ್ವಾತಂತ್ರ್ಯವೆಂದರೆ ಮಹಿಳೆ ಸಮಾಜದ,ತನ್ನ ಕುಟುಂಬದ ಹಾಗೂ ವೈಯಕ್ತಿಕವಾದ ಎಲ್ಲ ವಿಚಾರಗಳಲ್ಲಿ ತನ್ನದೇ ಆದ ನಿರ್ಧಾರಗಳನ್ನು ಕೈಗೊಳ್ಳುವಂತಹ ಸ್ವಾತಂತ್ರ್ಯ.ಎಷ್ಟು ಮಂದಿ ಮಹಿಳೆಯರಿಗೆ ಇಂತಹ ಸ್ವಾತಂತ್ರ್ಯ ಇದೆ.ಕೇವಲ ಕೆಲವೇ ಕೆಲವರಿಗಿರಬಹುದು.ಇಂದು ಎಷ್ಟೊಂದು ಮನೆಗಳಲ್ಲಿ ವಿದ್ಯಾವಂತ ಸ್ತ್ರೀಯರು ಸ್ವತಂತ್ರವಾಗಿದ್ದಾರೆ? ಎಂದರೆ ಕೇವಲ ಬೆರಳೆಣಿಕೆಯಷ್ಟು ಸ್ತ್ರೀಯರು ಮಾತ್ರ ನಮಗೆ ಕಾಣಸಿಗುತ್ತಾರೆ. ಅವಿದ್ಯಾವಂತ ಸ್ತ್ರೀಯರಂತೂ ಅಧಿಕಾರದ ಹಾಗೂ ಇನ್ನಿತರ ಕೆಲವು ಹಕ್ಕುಗಳನ್ನು ಚಲಾಯಿಸುವ ಸಂದರ್ಭಗಳಲ್ಲಿ ಪುರುಷರ ಕೈಗೊಂಬೆಗಳಾಗಿ ವರ್ತಿಸಬೇಕಾದ ಅನಿವಾರ್ಯತೆ ಇದೆ. ಈ ನಿಟ್ಟಿನಲ್ಲಿ ಸ್ತ್ರೀ ವಿದ್ಯಾವಂತಳಾದರೂ ಸಹ, ಸಮಾಜದಲ್ಲಿ ಸ್ವತಂತ್ರಳೆಂದು ಪರಿಗಣಿಸಿದರೂ ಸಹ ,ನಿಜವಾದ ಅರ್ಥದಲ್ಲಿ ಅವಳು ಸ್ವತಂತ್ರವಾಗಿ ಬದುಕುತ್ತಾ ಇಲ್ಲವೆಂದೇ ಹೇಳಬಹುದು.

ಪುರುಷ ಪ್ರಧಾನ ಸಮಾಜ ಹಾಗೂ ಕುಟುಂಬದಲ್ಲಿ ಮಹಿಳೆಗೆ ಸಂಪೂರ್ಣ ಸ್ವಾತಂತ್ರ್ಯವನ್ನು ಇನ್ನೂ ಅನುಭವಿಸಲು ಆಗ್ತಾ ಇಲ್ಲ ಎಂದೇ ಹೇಳಬಹುದು. ಸಮಾಜದಲ್ಲಿ ವಿದ್ಯಾವಂತ ಸ್ತ್ರೀ ಕೆಲವೊಂದು ಕಟ್ಟುಪಾಡುಗಳಿಗೆ ಕಟ್ಟು ಬಿದ್ದು, ತನಗಿರುವ ಸ್ವಾತಂತ್ರ್ಯವನ್ನು ಅನುಭವಿಸಲಾಗದೆ ಅವಲಂಬನೆಯನ್ನು ಮಾಡಬೇಕಾದ ಪರಿಸ್ಥಿತಿ ಹಲವು ಸಲ ನಾವು ಕಂಡಿದ್ದೇವೆ, ಕಾಣುತ್ತಿದ್ದೇವೆ ಕಾನೂನಿನ ಪ್ರಕಾರ ಸ್ತ್ರೀ ಸ್ವತಂತ್ರಳು ಆಗಿದ್ದರೂ ಸಹ,ನಿಜವಾದ ಅರ್ಥದಲ್ಲಿ ಸ್ತ್ರೀ ಸಂಪೂರ್ಣವಾದ ಸ್ವಾತಂತ್ರವನ್ನು ಅನುಭವಿಸುವ ಸ್ಥಿತಿಯಲ್ಲಿಲ್ಲ .ಒಂದಲ್ಲ ಒಂದು ಕಾರಣಕ್ಕೆ ಸ್ತ್ರೀ ವಿದ್ಯಾವಂತಳಾದರೂ ಇತರರ ಅಭಿಪ್ರಾಯಕ್ಕೆ ತಲೆಬಾಗಲೇಬೇಕಾದ ಅನಿವಾರ್ಯತೆ ಸೃಷ್ಟಿಯಾಗುತ್ತದೆ. "ಪುರುಷ ಪ್ರಧಾನ"ಎಂಬ ನಿಲುವು ಸಮಾಜದಲ್ಲಿ ಆಳವಾಗಿ ಹೂತು ಹೋಗಿರುವುದನ್ನು ಬೇರು ಸಹಿತ ಕಿತ್ತೊಗೆಯಬೇಕಾದರೆ ಬಹಳಷ್ಟು ಕಾಲಹಿಡಿಯುತ್ತದೆ ಸಾಕಷ್ಟು ಶ್ರಮ ಪಡುವ ಅಗತ್ಯವಿದೆ. ಮಹಿಳೆಯರಿಗೆ ಪುರುಷರಷ್ಟೇ ಹಕ್ಕು,ಬಾದ್ಯತೆಗಳಿರುವಾಗ,ಕಾನೂನು ಮಹಿಳೆಗೆ ಸಮಾನತೆಯನ್ನು ನೀಡಿರುವಾಗ,ಅದನ್ನು ಅನುಭವಿಸುವ ಸ್ವಾತಂತ್ರ್ಯ ಮಹಿಳೆಗಿದೆ.ಅದನ್ನು ಅನುಭವಿಸ್ತಾ ಇಲ್ಲವೆಂದರೆ ಅದಕ್ಕೆ ತೊಡಕು ಮಹಿಳೆಯಲ್ಲಿಯೇ ಇದೆ ಎಂದು ಅರ್ಥವಲ್ಲವೇ? ಕೇವಲ ಸಮಾನತೆ,ಸಮಾನತೆ ಎಂದರೆ ಸಮಾನತೆಯಾಗದು.ಸ್ವಾತಂತ್ರವೆಂದರೆ ಸ್ವೇಚ್ಛೆಯಲ್ಲ.ಕಾನೂನಾತ್ಮಕವಾಗಿ ಸಿಕ್ಕಂತಹ ಸ್ವಾತಂತ್ರ್ಯವನ್ನು ದುರ್ಬಳಕೆ ಮಾಡದೇ ಅದನ್ನು ಬಳಸಿಕೊಂಡು ಮಹಿಳೆಯರು ಸಮಾನರಾಗಿ ಎದ್ದು ನಿಲ್ಲಬೇಕು.

ಒಂದು ಸಮಾಜದಲ್ಲಿ ಒಬ್ಬ ವಿದ್ಯಾವಂತ ಸ್ತ್ರೀ ತನ್ನ ಜೀವನವನ್ನ ನಿರ್ಭೀತಿಯಿಂದ, ಸ್ವತಂತ್ರಳಾಗಿ,

ಸಂತೃಪ್ತಿಯಿಂದ ಕಳೆಯಬೇಕಿದ್ದರೆ ಅವಳಲ್ಲಿ ಧೈರ್ಯ, ಸ್ಥೈರ್ಯ, ಮಾನಸಿಕ ಗಟ್ಟಿತನ ಇರಲೇಬೇಕಾಗುತ್ತದೆ. ಇಂದು ಸಮಾಜದಲ್ಲಿ ಎಷ್ಟು ಮಂದಿ ಸ್ತ್ರೀಯರು ಇಂತಹ ಧೈರ್ಯವನ್ನು, ಸ್ಥೈರ್ಯವನ್ನು, ಗಟ್ಟಿತನವನ್ನು ಹೊಂದಿರುತ್ತಾರೋ ಅವರು ಸ್ವತಂತ್ರವಾಗಿ ಬದುಕುತ್ತಾರೆ. "ಬೇರೆಯವರು ಏನೇ ಹೇಳಲಿ ತಾನು ತನಗಾಗಿ ಬದುಕುತ್ತೇನೆ "ಎಂಬ ದೃಢ ನಿರ್ಧಾರದಿಂದ ಮುಂದುವರಿಯುತ್ತಾರೆ. ಆದರೆ ಇಂತಹ ಧೈರ್ಯ ಎಲ್ಲಾ ಸ್ತ್ರೀಯರಿಗೆ ಬರಲಾರದು. ಕೆಲವರು ಅವರಿವರ ಬೆದರಿಕೆಗೆ ,ಕುಹಕನುಡಿಗೆ ಹೆದರಿ ಅವಲಂಬನೆಯ ಬದುಕನ್ನೇ ಇನ್ನೂ ಕೂಡ ಬದುಕುವವರು ಇದ್ದಾರೆ .ವಿದ್ಯಾವಂತರಾದರೂ, ಬುದ್ಧಿವಂತಿಕೆ ಇದ್ದರೂ ಸ್ವಾತಂತ್ರ್ಯವಿಲ್ಲದೆ ಪರದಾಡುವವರೂ ಇದ್ದಾರೆ. ಹಾಗಾಗಿ ನಮ್ಮ ಸಮಾನತೆಯ ಸಮಾಜದಲ್ಲಿ ಸ್ತ್ರೀ ಸಂಪೂರ್ಣ ಸ್ವತಂತ್ರಳಾಗಿ ಬದುಕಬೇಕಾದರೆ ಇನ್ನಷ್ಟು ಧೈರ್ಯ ತುಂಬುವ ಕೆಲಸವಾಗಬೇಕು,ಗಂಡಸರೂ ಕೂಡ ತ್ಯಾಗ, ಸಮರ್ಪಣಾ ಭಾವ, ಸ್ವೀಕೃತ ಮನೋಭಾವ ಬೆಳೆಸಬೇಕಾಗಿದೆ. ಒಟ್ಟಿನಲ್ಲಿ ಹೇಳುವುದಾದರೆ ಸಮಾಜದಲ್ಲಿ ವಿದ್ಯಾವಂತ ಸ್ತ್ರೀ ಇರಲಿ ಅವಿದ್ಯಾವಂತಳಿರಲಿ ಸಂಪೂರ್ಣ ಸ್ವತಂತ್ರಳಾಗಿ ಬದುಕು ನಡೆಸಲು ಆಗುತ್ತಿಲ್ಲ ಎಂಬುವುದು ನಾವು ಕಾಣುತ್ತಿರುವ ಸತ್ಯ. ಇದು ಸಾಧ್ಯವಾಗಬೇಕಾದರೆ ಮಹಿಳೆಯರೇ ಮನಸ್ಸು ಮಾಡಬೇಕು. ಸ್ವಾತಂತ್ರ್ಯದ ಅಮಲಿನಲ್ಲಿ ದಾರಿ ತಪ್ಪಬಾರದು. ಅನುಭವಿಸುವ ಸ್ವಾತಂತ್ರ್ಯದಿಂದ ಬೇರೆಯವರ ಜೀವನಕ್ಕೆ ಕಂಟಕ ಬರಬಾರದು.ಸಾಮಾಜಿಕ ಸ್ವಾಸ್ಥ್ಯ ಕೆಡಬಾರದು.ನಮ್ಮ ಸ್ವತಂತ್ರ ಬದುಕಿನಿಂದ ಸಾಮರಸ್ಯದ ಜೀವನ ನಡೆಯಬೇಕು.ಆ ನಿಟ್ಟಿನಲ್ಲಿ ಪೂರಕವಾದ ವಾತಾವರಣವನ್ನು ಬೆಳೆಸಬೇಕಾಗದರೆ ಮಹಿಳೆಯರು ಸ್ವಾತಂತ್ರ್ಯವೆಂದು ಬೀಗದೆ ಮಾಗಬೇಕಾಗಿದೆ.ಪುರುಷರಿಗೆ ಸಮಾನರಾಗಿ,ಸ್ತ್ರೀ–ಪುರುಷರು ಸಮಾಜದ ಎರಡು ಕಣ್ಣುಗಳಾಗಿ ಬದುಕಬೇಕಾಗಿದೆ. ಮಹಿಳೆಯ ಮನಸ್ಸು ಗಟ್ಟಿಯಾಗಬೇಕಿದೆ.ಸಾಮಾಜಿಕ ಜೀವನದಲ್ಲಿ ಎದುರಾಗುವ ಸವಾಲುಗಳಿಗೆ ಸಡ್ಡೊಡೆದು ಸ್ವತಂತ್ರ ಜೀವನ ನಡೆಸುವಷ್ಟು ಮಹಿಳೆಯರು ಗಟ್ಟಿಯಾದರೆ ಅದುವೇ ಸ್ತ್ರೀ ಸ್ವಾತಂತ್ರ್ಯ,ಸಮಾನತೆ.



### ವಿಜಯಪುರ ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘ & ಕರ್ನಾಟಕ ಛಾಯಾಗ್ರಾಹಕರ ಸಂಘದ ಸಹಯೋಗದಲ್ಲಿ ಸೋನಿ ಅಲ್ಫಾ ಛಾಯಾಗ್ರಹಣ ಕಾರ್ಯಗಾರ

# ಐತಿಹಾಸಿಕ ದಾಖಲೀಕರಣ ಮಾಡುವವರು ಛಾಯಾಗ್ರಾಹಕರು

**ಉದಯರಶ್ಮಿ ನ್ಯೂಸ್**




ವಿಜಯಪುರ: ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘ ಮತ್ತು ಕರ್ನಾಟಕ ಛಾಯಾಗ್ರಾಹಕರ ಸಂಘದ ಸಹಯೋಗದಲ್ಲಿ ನಗರದ ಫರ್ನ ಹೋಟೆಲ್ ಸಭಾಂಗಣದಲ್ಲಿ ಸೋನಿ ಅಲ್ಫಾ ಛಾಯಾಗ್ರಹಣ ಕಾರ್ಯಗಾರ ಹಮ್ಮಿಕೊಳ್ಳಲಾಗಿತ್ತು

ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದ ಶ್ರೀ ಸಿದ್ದೇಶ್ವರ ಸಹಕಾರಿ ಬ್ಯಾಂಕಿನ ನಿರ್ದೇಶಕ ರಮೇಶ ಬಿದನೂರ, ಆಧುನಿಕ ತಂತ್ರಜ್ಞಾನದೊಂದಿಗೆ ಇವತ್ತಿನ ಕಾಲಕ್ಕೆ ತಕ್ಕಂತೆ ಹೊಂದಿಕೊಂಡು ಆಧುನಿಕ ಜಗತ್ತಿನ ಎಲ್ಲಾ ನೋವು–ನಲಿವುಗಳ ಜೊತೆಯಲ್ಲಿ ಐತಿಹಾಸಿಕ ದಾಖಲೀಕರಣ ಮಾಡುವವರು ಛಾಯಾಗ್ರಾಹಕರು. ಜಗತ್ತಿನಲ್ಲಿ ಎಷ್ಟೇ ಪ್ರಭಾವಶಾಲಿಯಾದ ವ್ಯಕ್ತಿಯನ್ನು ಸ್ಮಾಯಿಲ್ ಪ್ಲೀಸ್ ಅನ್ನುವ ಹಕ್ಕು ಇರುವುದು ಮಾತ್ರ ಛಾಯಾಗ್ರಾಹಕರಿಗೆ. ಅಂತಹ ವೃತ್ತಿ ಇವತ್ತು ಅತ್ಯಂತ ಪ್ರಭಾವಶಾಲಿಯಾಗಿ ಬೆಳೆದಿದೆ. ಸಮಾಜದಲ್ಲಿ ಯಾವುದೆ ವೃತ್ತಿಯಿಂದ ಜನ ನನ್ನನ್ನು ಗುರುತಿಸುತಿದ್ದರೂ ನಾನು ಮೂಲತ: ಇದೆ ಛಾಯಾಗ್ರಾಹಕ ವೃತ್ತಿಯಿಂದನೆ ಬೆಳೆದದ್ದು. ಛಾಯಾಗ್ರಾಹಕರಿಗೆ ಕಲಾವಿದರಿಗೆ ನಾವು ಗೌರವಿಸಬೇಕು ಎಂದು ತಮ್ಮ ಉದ್ಘಾಟನಾಪರ ಮಾತುಗಳನ್ನಾಡಿದರು.

ಮುಖ್ಯ ಅತಿಥಿಗಳಾಗಿ ಸೋನಿ ಕಂಪನಿಯ ಹಿರಿಯ ಮಾರಾಟಗಾರರಾದ ನಿತೀನಕುಮಾರ ಮಾತನಾಡುತ್ತಾ, ರಾಜ್ಯದಲ್ಲಿ ಛಾಯಾಗ್ರಾಹಕರ ಬೆಳವಣಿಗೆಗೆ ಕಂಪನಿಯಿಂದ ಹಲವಾರು ಉಪಯುಕ್ತವಾದ ಮಾಹಿತಿಯ ಜೊತೆಗೆ ಅವಶ್ಯಕ ಕಾರ್ಯಗಾರ ಹಮ್ಮಿಕೊಳ್ಳಲಾಗುತಿದ್ದು ಇದಕ್ಕೆ ವಿಜಯಪುರ ಛಾಯಾಗ್ರಾಹಕರು ಅತ್ಯಂತ ಹರ್ಷದಿಂದ ಇಲ್ಲಿ ಭಾಗವಹಿಸಿದ್ದಾರೆ. ಇದಕ್ಕೆ ಸಹಕರಿಸಿದ ಸಂಘದ ಎಲ್ಲ ಪದಾಧಿಕಾರಿಗಳಿಗೆ ಕಂಪನಿಯ ಪರವಾಗಿ ಶುಭಾಶಯಗಳನ್ನು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ವಿಜಯಪುರ ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ರಮೇಶ ಚವ್ಹಾಣ ಪ್ರಾಸ್ತಾವಿಕವಾಗಿ ಮಾತನಾಡಿ ಎಲ್ಲರನ್ನು ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಸ್ಕೈಯರ್ ಕಲರ್ ಲ್ಯಾಬನ ಮುರಾರಿ ಕರ್ವಾ, ಸೋನಿ ಕಂಪನಿಯ ಹಿರಿಯ ಮಾರಾಟ ವ್ಯವಸ್ಥಾಪಕ ನಿತೀನ ಕುಮಾರ, ಹಿರಿಯ ವಿತರಕ ವಸಂತ ಕುಮಾರ, ಉಪಸ್ಥಿತರಿದ್ದರು.

ಉದ್ಘಾಟನೆ ಕಾರ್ಯಕ್ರಮದ ನಂತರ ಸೋನಿ ಕಂಪನಿಯ ಮೆಂಟರಾದ ಮುಸ್ತಫಾ ಬಾಷಾ ಇವರಿಂದ ನೂತನ ಕ್ಯಾಮರಾ ಮಾಡೆಲ್‌ಗಳು ಮತ್ತು ಕ್ಯಾಮೆರಾ ಟೆಕ್ನಿಕ್‌ಗಳ ಬಗ್ಗೆ ಕಾರ್ಯಗಾರ ನಡೆಯಿತು.

ಸಂಘದ ಕಾರ್ಯದರ್ಶಿ ಸತೀಶ್ ಕಲಾಲ ಕಾರ್ಯಕ್ರಮ ನಿರ್ವಹಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ವಿಜಯಪುರ ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘದ ಪದಾಧಿಕಾರಿಗಳಾದ ಸುರೇಶ್ ರಾಠೋಡ್, ರಾಜುಸಿಂಗ್ ರಜಪೂತ್, ಗುರುಬಾಳಪ್ಪ ಗಲಗಲಿ, ಮಲ್ಲಿಕಾರ್ಜುನ್ ಪಾರ್ವತಿ, ಪವನ ಅಂಗಡಿ, ಮಹೇಶ್ ಕುಂಬಾರ್, ಛಾಯಾಗ್ರಾಹಕರಾದ ವರ್ಷೀರಭಾಷಾ ಮುಜಾವರ, ಮೌನೇಶ್ ಬಡಿಗೇರ್, ಸಂಗಯ್ಯ ಮಠಪತಿ, ಬಿ.ಎಸ್. ಪಾಟೀಲ, ಬಾಳು ಕಲಾಲ, ಪ್ರಮೋದ್ ಕಾಜಗಾರ್, ಸುರೇಶ್ ಗುಲ್ಪಿ, ವಿಠ್ಠಲ್ ಗುಜ್ಜರ, ಕಿಶೋರ ಖಂಡಾಗಳೆ, ನಾಗಯ್ಯಾ ಗಣಾಚಾರಿ, ಸಂಗನಗೌಡ ಬಿರಾದಾರ ಗೌಡಪ್ಪಗೌಡ ಬೀರಾದಾರ, ಅನಂತ ಭೋಸಲೆ ಸಹಿತ 100 ಜನ ಕ್ಕೂ ಹೆಚ್ಚು ಛಾಯಾಗ್ರಾಹಕರು ಭಾಗವಹಿಸಿ ಕಾರ್ಯಾಗಾರ ಯಶಸ್ವಿಗೊಳಿಸಿದರು.

# ಅಪ್ಪು ಅಭಿಮಾನಿಯಿಂದ 5 ಲಕ್ಷ ಗಿಡಗಳನ್ನು ನೆಡುವ ಸಂಕಲ್ಪ

**ಉದಯರಶ್ಮಿ ನ್ಯೂಸ್**




ಮುದ್ದೇಬಿಹಾಳ: ಪುನೀತ್ ರಾಜಕುಮಾರ ಅವರ ಮಾನವೀಯಗುಣಗಳನ್ನು ನಾಡಿಗೆ ಪರಿಚಯಿಸುವ ಉದ್ದೇಶದಿಂದ ಅವರ ಅಭಿಮಾನಿಯೊಬ್ಬರು 5 ಲಕ್ಷ ಗಿಡಗಳನ್ನು ನೆಡುವ ಸಂಕಲ್ಪ ತೊಟ್ಟು ಜಗತ್ತಿನಾದ್ಯಂತ ಪ್ರವಾಸ ಕೈಗೊಂಡಿದ್ದಾರೆ.

3 ವರ್ಷದ ಸುಧೀರ್ಘ ಪ್ರವಾಸದಲ್ಲಿರುವಾಗ ಪಟ್ಟಣದಲ್ಲಿ ಗುರುವಾರ ಮಾಧ್ಯಮದವರಿಗೆ ಕಾಣಿಸಿಕೊಂಡ ಈ ಅಪ್ಪು ಅಭಿಮಾನಿ ಮೂಲತಃ ತಮಿಳುನಾಡಿನ ಕೊಯಮತ್ತೂರು ಜಿಲ್ಲೆಯ ಪೊಲ್ಲಾಚಿ ಗ್ರಾಮದವರು. ಇವರ ಹೆಸರು ಮುತ್ತು ಸೆಲ್ವಂ. ಇವರ ಸ್ನೇಹಿತರ ಮಡದಿಯೊಬ್ಬರ ಆಪರೇಶನ್ ಸಂದರ್ಭದಲ್ಲಿ ಸಹಾಯ ಕೇಳಿದಾಗ ಗೋಲ್ಡ್ ಚೈನ್‌ಒಂದನ್ನ ಅಪ್ಪು ಸಹಾಯ ಮಾಡಿದ್ದು ಅಂದಿನಿಂದ ಅವರ ಅಭಿಮಾನಿಯಾಗಿದ್ದೇನೆ ಎಂದು ಹೇಳಿಕೊಂಡರು. ಅವರು ಕಾಲವಾದ ನಂತರ ನಾನು ಜಗತ್ತಿನಾದ್ಯಂತ ಸೈಕಲ್ ಮೂಲಕ ಸವಾರಿ ಪ್ರಾರಂಭಿಸಿದ್ದು, ಅಪ್ಪು ಅವರ ಒಳ್ಳೆಯ ಗುಣಗಳನ್ನು ಎಲ್ಲೆಡೆ ಪಸರಿಸುತ್ತ ಪ್ರತೀ ತಾಲೂಕಿನಲ್ಲೊಂದು ಅವರ ಹೆಸರಿನಲ್ಲಿ ಸಸಿ ನೆಡುತ್ತಾ ಸವಾರಿ ನಡೆಸಿದ್ದೇನೆ. ಈಗಾಗಲೇ 3ಲಕ್ಷ 51ಸಾವಿರ ಸಸಿಗಳನ್ನು ನೆಟ್ಟಿದ್ದು ಒಟ್ಟು 5ಲಕ್ಷ ಸಸಿ ನೆಡುವ ಯೋಜನೆ ಹಾಕಿಕೊಂಡಿದ್ದೇನೆ. ತಮಿಳುನಾಡಿನಿಂದ ಶುರುವಾದ ನನ್ನ ಸೈಕಲ್ ಸವಾರಿ ಲಡಾಕ್, ಜಮ್ಮು, ಗೋವಾ, ರಾಜಸ್ಥಾನ ರಾಜ್ಯಗಳಲ್ಲಿ ಪ್ರವಾಸ ಮುಗಿಸಿ ಸಧ್ಯ ಕರ್ನಾಟಕಕ್ಕೆ ಬಂದಿದ್ದು, ಮುಂದೆ ಪಾಂಡಿಚೇರಿ, ನೇಪಾಳ, ಬಾಂಗ್ಲಾದೇಶ ಮಾರ್ಗವಾಗಿ 2025 ರ ಹೊತ್ತಿಗೆ ದೆಹಲಿಗೆ ಬಂದು 2025 ರ ಜ15 ರಂದು ಅಪ್ಪು ಸಮಾಧಿಯಲ್ಲಿ ಬಾವುಟವನ್ನು ಇಳಿಸಿ ನನ್ನ ಪ್ರವಾಸವನ್ನು ಅಂತ್ಯಗೊಳಿಸುತ್ತೇನೆ. ಯಾವುದೇ ಗೇರ್ ಇಲ್ಲದ ಸಾಧಾರಣ ಸೈಕಲ್ ಇದಾಗಿದ್ದು ನನ್ನ ಹಾಸಿಗೆ, ಹೊದಿಕೆ, ಗ್ಯಾಸ್, ಒಲೆ, ಬಟ್ಟೆ ಸೇರಿ ಒಟ್ಟು 122 ಕೆಜಿ ಭಾರ ಹೊಂದಿದೆ. ನನ್ನ ಅಡುಗೆಯನ್ನ ನಾನೇ ತಯಾರಿ ಮಾಡಿಕೊಳ್ಳುತ್ತೇನೆ. ಮಲಗೋದು ಪೆಟ್ರೋಲ್ ಪಂಪ್‌ಗಳಲ್ಲಿ ಸಾರ್ವಜನಿಕರು ತಮ್ಮ ಕೈಲಾದ ಸಹಾಯ ಮಾಡುತ್ತಿದ್ದು ನನಗೆ ಇನ್ನಷ್ಟು ಪ್ರೋತ್ಸಾಹ ದೊರತಂತಾಗಿದೆ ಎಂದು ವಿವರಿಸಿದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR